ಸಂಪುಟ : 9 ಸಂಚಿಕೆ 189 ಪುಟ : 4 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 3 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 189 Pages : 4 Price : 3.00 Tuesday september 3 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ 110/11 ಕೆ.ವಿ ವಿದ್ಯುತ್ ವಿತರಣಾ ಉಪ-ಕೇಂದ್ರದ ತ್ರೈಮಾಸಿಕ ನಿರ್ವಹಣೆಯ ನಿಮಿತ್ತ ಸೆ. 4ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ಕೇಂದ್ರದಿಂದ ಪೂರೈಕೆಯಾಗುವ ಕೋಡಿಕೊಪ್ಪ, ತೋಟಗಂಟಿ, ಮಲ್ಲಾಪೂರ, ಬೂದಿಹಾಳ, ಕೋಚಲಾಪೂರ, ದ್ಯಾಂಪೂರ, ಹಾಲಕೆರೆ, ನಿಡಗುಂದಿ, ನಿಡಗುಂದಿಕೊಪ್ಪ, ಕಳಕಾಪೂರ, ಮಾರನಬಸರಿ, ಜಕ್ಕಲಿ, ಕೋಟುಮಚಗಿ, ನಾರಾಯಣಪೂರ, ಅಬ್ಬಿಗೇರಿ, ಯರೇಬೇಲೇರಿ, ನಾಗರಾಳ, ಕುರಡಗಿ, ಡ.ಸ. ಹಡಗಲಿ, ಗುಜಮಾಗಡಿ ಸೇರಿದಂತೆ ಸುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 3ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ

ವಾರ್ಡ್ ನಂ. 22 ಯಲ್ಲಮ್ಮನ ಗುಡಿ ಲೈನ್, ಕನ್ನಡ ಶಾಲೆ, ಶಿವಪ್ಪರ ಲೈನ್, ಅಂಗಡಿಯವರ ಲೈನ್ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 16, 21 ಕುಷ್ಠರೋಗ ಕಾಲೋನಿ ಭಾಗ -1,2,3,4, ಅಂಬೇಡ್ಕರ್ ಓಣಿ, ಅಬ್ಬಿಗೇರಿ ಕಾಲೋನಿ ಎಡಭಾಗ, ಬಲಭಾಗ, ಕುಂಬೇಶ್ವರ ನಗರ, ಮಸೂತಿ ಭಾಗ, ರಹಮತ್ ನಗರದ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 30, 34 ವಡ್ಡರಗೇರಿ, ಕೊರವರ ಓಣಿ, 46 ಪ್ಲಾಟ್, ಮೂರು ಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, 1 ನೇ ಕ್ರಾಸ್, ಶಿವಾನಂದ ಗಾರ್ಡನ್, ಮಸೂತಿ ಭಾಗ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 24, 26 ಅಬ್ಬಿಗೇರಿ ಕಾಂಪೌಂಡ್, ಸಾಲ ಮನೆ, ಕಮ್ಮಾರ ಸಾಲ, ತಗ್ಗಿನ ಲಾಟ್, ಮಕಾನಗಲ್ಲಿ, ಉರ್ದು ಶಾಲೆ ಉಳಿದ ಭಾಗಗಳು.

ವಾರ್ಡ್ ನಂ. 29 ಪೊಲೀಸ್ ಸ್ಟೇಷನ್ ಮೇಲಿನ ಭಾಗ, ಚಂದಾವರಿಯವರ ಲೈನ್, ಡಂಬಳದವರ ಲೈನ್, ಸ್ವಿಮ್ಮಿಂಗ್ ಪೂಲ್, ಮಸೂತಿ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 8, 9, 10 ತೆಗ್ಗಿನ ಪೇಟೆ, ಹದ್ದಣ್ಣವರ ಲೈನ್, ಚರ್ಚ್ ಲೈನ್, ಕಬಾಡೆ ರೋಡ್, ತೆಂಗಿನಕಾಯಿ ಬಜಾರ, ಬೋರೇಗಾರ ಓಣಿ, ಮಜ್ಜಿಗೆ ಓಣಿ, ಅಂಬಾಭವಾನಿ ಗುಡಿ ಲೈನ್, ಕುರಹಟ್ಟಿ ಪೇಟೆಯ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 5 ಹನುಮಂತ ದೇವರ ಗುಡಿ ಲೈನ್, ನೇಕಾರ ಕಾಲೋನಿ, ಬಸ್ ಸ್ಟಾಪ್ ಲೈನ್, ಬನ್ನಿ ಮಹಾಕಾಳಿ ಗುಡಿ, ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡೆಕ್ಕನ್ ಹೆರಿಟೇಜ್ ಫೌಂಡೇಶನ್‌ನಿಂದ ಸೂಡಿ ದೇವಸ್ಥಾನದ ನಾಗಕುಂಡ ಪುಷ್ಕರಣಿ ಸ್ಥಳ ವೀಕ್ಷಣೆ

## ಪ್ರವಾಸೋದ್ಯಮಕ್ಕೆ ಮತ್ತಷ್ಟು ಮಹತ್ವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಪಾರಂಪರಿಕ ಸ್ಥಳವಾದ ಸೂಡಿಯ ಜೋಡು ಗೋಪುರ ದೇವಸ್ಥಾನ ನಾಗಕುಂಡ ಪುಷ್ಕರಣಿ (ರಸದ ಬಾವಿ) ಸೇರಿದಂತೆ ಪ್ರಮುಖ ಸ್ಮಾರಕಗಳಿಗೆ ಸೋಮವಾರ ಡೆಕ್ಕನ್ ಹೆರಿಟೇಜ್ ಫೌಂಡೇಶನ್ ಇಂಡಿಯಾ ಸಂಸ್ಥೆಯ ಪ್ರತಿನಿಧಿಗಳು ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ನಾಗಕುಂಡ ಪುಷ್ಕರಣಿ ಹಾಗೂ ಸುತ್ತಲಿನ ಸ್ಥಳ ಸೇರಿದಂತೆ ಪ್ರಮುಖ ಸ್ಮಾರಕಗಳನ್ನು ಅಭಿವೃದ್ಧಿಪಡಿಸುವ ಮೂಲಕ ನಿರ್ವಹಣೆ ಮಾಡುವ ಕುರಿತಂತೆ ಡೆಕ್ಕನ್ ಹೆರಿಟೇಜ್ ಫೌಂಡೇಶನ್ ಇಂಡಿಯಾ ಸಂಸ್ಥೆಯ ಪ್ರತಿನಿಧಿಗಳಾದ ರಾಜಶ್ರಿ, ಪ್ರತಿಮಾ ರಾವ್, ಶರತ್‌ಚಂದ್ರ ಅವರುಗಳು ಸೂಡಿ ಗ್ರಾಮಕ್ಕೆ ಆಗಮಿಸಿ ಸ್ಥಳ ಪರಿಶೀಲನೆ ನಡೆಸಿ, ಐತಿಹಾಸಿಕ ಸ್ಮಾರಕಗಳ ಕುರಿತು ಅಧಿಕಾರಿಗಳಿಂದ ಹಾಗೂ ಸ್ಥಳೀಯ ಪ್ರಮುಖರಿಂದ ಮಾಹಿತಿ ಕಲೆ ಹಾಕಿದರು.

ರೋಣ ಶಾಸಕ ಹಾಗೂ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ್ ಅವರು ಈ ಸಂದರ್ಭದಲ್ಲಿ ಹಾಜರಿದ್ದು, ಆಗಮಿಸಿದ ಪ್ರತಿನಿಧಿಗಳನ್ನು ಗೌರವಿಸಿ, ಸತ್ಕರಿಸಿ ಮಾತನಾಡಿ, ಸೂಡಿ ಐತಿಹಾಸಿಕವಾಗಿ ಬಹಳಷ್ಟು ಪ್ರಸಿದ್ಧವಾಗಿದೆ. ಇಲ್ಲಿನ ರಸದ ಬಾವಿ ಪುಷ್ಕರಣಿ ಸೇರಿದಂತೆ ವಿವಿಧ ಸ್ಥಳಗಳನ್ನು ಅಭಿವೃದ್ಧಿಪಡಿಸಿ ಸಂರಕ್ಷಿಸಿ ನಿರ್ವಹಿಸಲು ಮುಂದೆ ಬಂದಿರುವ ಡೆಕ್ಕನ್ ಹೆರಿಟೇಜ್ ಫೌಂಡೇಶನ್ ಇಂಡಿಯಾ ಸಂಸ್ಥೆಗೆ ಅಭಿಮಾನ ಪೂರ್ವಕ ಅಭಿನಂದನೆಗಳು. ಈ ಸ್ಮಾರಕಗಳ ಅಭಿವೃದ್ಧಿ ಹಾಗೂ ಸಂರಕ್ಷಣೆಯಿಂದ ಈ ಭಾಗದಲ್ಲಿ ಪ್ರವಾಸೋದ್ಯಮಕ್ಕೆ ಮತ್ತಷ್ಟು ಮಹತ್ವ



ದೊರೆಯಲಿದೆ ಎಂದರು.

11ನೇ ಶತಮಾನದಲ್ಲಿ ಗದಗ ಜಿಲ್ಲೆ ಸೂಡಿಯು ಕಲ್ಯಾಣ ಚಾಲುಕ್ಯ ಅರಸರ ಮಗಳಾದ ಅಪ್ರತಿಮ ಮಹಿಳೆ ಅಕ್ಕಾದೇವಿಯ ಆಡಳಿತ ಕಾಲದಲ್ಲಿ ಶಿಲ್ಪಕಲೆಯ ವೈಭವಕ್ಕೆ ಬಹಳ ಪ್ರಸಿದ್ಧಿ ಪಡೆದಿತ್ತೆಂದು ಮತ್ತು ಇಲ್ಲಿಯ ವಿಶ್ವವಿದ್ಯಾನಿಲಯದಲ್ಲಿ ಶಿಲ್ಪಕಲೆ, ಲಲಿತಕಲೆ, ಆಚಾರ ಸಂಹಿತೆ, ನಾಟ್ಯಶಾಸ್ತ್ರಗಳನ್ನು ಕಲಿಸಲಾಗುತ್ತಿತ್ತೆಂದು ಇಲ್ಲಿಯ ಅನೇಕ ಶಿಲಾಲಿಪಿಗಳಿಂದ ಕಂಡುಬಂದಿದೆ ಎಂದರು.

ಇದಕ್ಕೂ ಮುನ್ನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರೊಂದಿಗೆ ಡೆಕ್ಕನ್ ಹೆರಿಟೇಜ್ ಫೌಂಡೇಶನ್ ಇಂಡಿಯಾ ಪ್ರತಿನಿಧಿಗಳು ಸಭೆ ನಡೆಸುವ ಮೂಲಕ ಸೂಡಿ ಐತಿಹಾಸಿಕ ಸ್ಮಾರಕಗಳ ಅಭಿವೃದ್ಧಿ ಕುರಿತು ಚರ್ಚಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಸೂಡಿ ಸ್ಮಾರಕಗಳ ಅಭಿವೃದ್ಧಿಗೆ ಸ್ಥಳ ಪರಿಶೀಲನೆಗೆ ಆಗಮಿಸಿರುವುದು ಸಂತಸ ತಂದಿದೆ. ಐತಿಹಾಸಿಕ ಸ್ಥಳಗಳ ಅಭಿವೃದ್ಧಿ ತಮ್ಮ ಸಂಸ್ಥೆಯಿಂದ ಮಾಡಲು ಇಲಾಖೆಯಿಂದ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ಸೂಡಿಯ ಸ್ಮಾರಕಗಳ ಸ್ಥಳ ಪರಿಶೀಲನೆ ಸಂದರ್ಭದಲ್ಲಿ ತಹಸೀಲ್ದಾರ ಕೆ.ನಾಗರಾಜ, ಧಾರವಾಡದ ಪುರಾತತ್ವ ಇಲಾಖೆಯ ಉಪನಿರ್ದೇಶಕಿ ಕಾವ್ಯಶ್ರೀ, ರಾಜಾರಾಂ, ಚಂದ್ರಶೇಖರ್ ಮುಸಳಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ ಸೇರಿದಂತೆ ಮತ್ತಿತರರು ಇದ್ದರು.

ನಾಗೇಶ್ವರ ದೇವಸ್ಥಾನ (ಜೋಡು ಕಳಸದ ಗುಡಿ), ಈಶ್ವರ, ನಂದಿಮಂಟಪ, ಹನ್ನೊಂದು ಅಡಿ ಎತ್ತರದ ಬೃಹತ್ ಗಣಪತಿಯ ದೇವಾಲಯ ಮತ್ತು ಎಂಬತ್ತು ಅಡಿ ಸುತ್ತಳತೆಯ ಐವತ್ತು ಅಡಿ ಆಳದ ಬೃಹತ್ ನಾಗಕುಂಡ ಭಾವಿ (ರಸ್ತ ಭಾವಿ) ಜೀರ್ಣೋದ್ಧಾರಗೊಂಡು ನೋಡುವಂತಾಗಿವೆ. ಇಡೀ ದೇವಾಲಯದ ಒಳಗೆ ಮತ್ತು ಹೊರಗೆ ಮತ್ತು ನಾಗಕುಂಡ ಭಾವಿಯ ಒಳಗೋಡೆಯಲ್ಲಿ ಉಬ್ಬುಕಂಬದ ಗೋಪುರ ಮಾದರಿಯ ಕೆತ್ತನೆ ಸಹ ಬೆರಗು ಗೊಳಿಸುವಂತೆ ಇದೆ. ಭಾವಿಯ ತಳಭಾಗದಲ್ಲಿ ಸುತ್ತಲೂ ಮೆಟ್ಟಲುಗಳಿದ್ದು ನಡುವೆ ದ್ವಾರಮಂಟಪವಿದೆ. ಈ ಎಲ್ಲ ಶಿಲ್ಪ ಕಲಾವೈಭವ ವಿದೇಶಿ ಪ್ರವಾಸಿಗರನ್ನು ಆಕರ್ಷಿಸುವಂತಿವೆ. ಈ ಪುಷ್ಕರಣಿ ಕಲ್ಯಾಣ ಚಾಲುಕ್ಯರ ಅತಿ ವೈಭವದ ಕೊಳ ಎಂಬುದಕ್ಕೆ ಐತಿಹಾಸಿಕ ದಾಖಲೆಗಳು ಲಭ್ಯವಾಗಿವೆ ಎಂದು ಪುರಾತತ್ವ ಇಲಾಖೆಯ ಅಧಿಕಾರಿಗಳು ಮಾಹಿತಿ ಒದಗಿಸಿದರು.



### ಗದಗ ಮತದಾರರ ಪಟ್ಟಿಗೆ ಸೇರ್ಪಡೆಗೊಳ್ಳದ ಎಸ್.ವಿ. ಸಂಕನೂರ, ಸಲೀಂ ಅಹ್ಮದ್

## ತಿರಸ್ಕೃತಗೊಂಡ ವಿಧಾನ ಪರಿಷತ್ ಸದಸ್ಯರ ಅರ್ಜಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಮತದಾರರ ಪಟ್ಟಿ ಸೇರ್ಪಡೆಗೆ ಅರ್ಜಿ ಸಲ್ಲಿಸಿದ್ದ ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಸಲೀಂ ಅಹ್ಮದ್ ಅವರ ಅರ್ಜಿಗಳು ಉಪವಿಭಾಗಾಧಿಕಾರಿಗಳಿಂದ ತಿರಸ್ಕೃತವಾಗಿವೆ.

ಸೋಮವಾರ ಈ ಕುರಿತು ಅಧಿಕೃತ ಆದೇಶ ನೀಡಿರುವ ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಈ ಹಿಂದೆ ಕಲಬುರಗಿ ಮಹಾನಗರ ಪಾಲಿಕೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ಸಂದರ್ಭದಲ್ಲಿ ಐವರು ಪರಿಷತ್ತಿನ ಸದಸ್ಯರನ್ನು ಮತದಾರರನ್ನಾಗಿ ಮಾಡಿ





ಪ್ರಾದೇಶಿಕ ಆಯುಕ್ತರು ಆದೇಶ ಹೊರಡಿಸಿದ್ದರು. ಇದನ್ನು ಪ್ರಶ್ನಿಸಿ ಕಲಬುರಗಿ ಹೈಕೋರ್ಟ್ ಪೀಠದಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿತ್ತು. ಅರ್ಜಿ ಪುರಸ್ಕರಿಸಿದ ಹೈಕೋರ್ಟ್, ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯಲ್ಲಿ ಮತದಾನ ಮಾಡುವ ಉದ್ದೇಶದಿಂದಲೇ ತಮ್ಮ ಮತದಾನದ ಹಕ್ಕು ಬದಲಾವಣೆ ಮಾಡಿಕೊಡಿರುವುದನ್ನು ಮನಗಂಡು ಪರಿಷತ್ ಸದಸ್ಯರ ಅರ್ಜಿಯನ್ನು ತಿರಸ್ಕರಿಸಿತ್ತು.

ಅಂತೆಯೇ ಗದಗ ಬೆಟಗೇರಿ ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಯಾವುದೇ ಸಂದರ್ಭದಲ್ಲಾದರೂ ನಡೆಯಬಹುದು. ಅರ್ಜಿದಾರರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾದರೆ ಮತದಾನದ ಹಕ್ಕು ಪಡೆಯುವ ಸಾಧ್ಯತೆಯಿದ್ದು, ಈ ಪ್ರಕಣದ ಅಂಶಗಳನ್ನು ಗಣನೆಗೆ ತೆಗೆದುಕೊಂಡಿದೆಯಲ್ಲದೆ, ಈ ಹಿಂದೆಯೂ ಗದಗ ವಿಧಾನಸಭೆ ಮತಕ್ಷೇತ್ರದ ಮತದಾರರ ಪಟ್ಟಿಗೆ ಸೇರ್ಪಡೆಗೊಳ್ಳುವ ಪ್ರಕರಣ ಧಾರವಾಡ ಹೈಕೋರ್ಟ್ ಪೀಠದಲ್ಲಿ ವಿಚಾರಣೆ ಹಂತದಲ್ಲಿ ಬಾಕಿ ಇದೆ.

ಈ ಎಲ್ಲ ಅಂಶಗಳನ್ನು ಪರಿಗಣಿಸಿ ಪ್ರಜಾಪ್ರಾತಿನಿಧ್ಯ ಕಾಯಿದೆ-1950 ಮತ್ತು ರಿಜಿಸ್ಟ್ರೇಷನ್ ಆಫ್ ಎಲೆಕ್ಟ್ರಾಲ್ ರೋಲ್-1960 ಆಂಡ್ ಅಮೆಂಡೆಡ್ ರೂಲ್-2013ರ ಪ್ರಕಾರ ಪರಿಷತ್ ಸದಸ್ಯರು ಸಲ್ಲಿಸಿದ ನಮೂನೆ-8ರ ಸ್ಥಳಾಂತರ ಅರ್ಜಿಯನ್ನು ತಿರಸ್ಕರಿಸಿ ಮತದಾರ ನೋಂದಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಗಂಗಪ್ಪ ಎಂ. ಆದೇಶ ಹೊರಡಿಸಿದ್ದಾರೆ.

## ನಿವೃತ್ತ ನೌಕರರ ಸಂಘಕ್ಕೆ ಶೀಘ್ರವೇ ನಿವೇಶನ



■ವಿಜಯಸಾಕ್ಷಿ ಸುದ್ದಿ, ರೋಣ

ಕರ್ನಾಟಕ ರಾಜ್ಯ ನಿವೃತ್ತ ಸಂಘದ ತಾಲೂಕಾ ಘಟಕಕ್ಕೆ ಅತಿ ಶೀಘ್ರದಲ್ಲಿ ನಿವೇಶನ ಒದಗಿಸುವ ಮೂಲಕ ಕಟ್ಟಡ ನಿರ್ಮಾಣಕ್ಕೆ ಅನುದಾನವನ್ನು ನೀಡಲಾಗುವುದು ಎಂದು ಖನಿಜ ನಿಗಮದ ಅಧ್ಯಕ್ಷ ಹಾಗೂ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಪಟ್ಟಣದ ಅಂಜುಮನ್ ಸಂಸ್ಥೆಯ ಶಾದಿಮಹಲ್‌ನಲ್ಲಿ ಜರುಗಿದ ರಾಜ್ಯ ಸರಕಾರ ನಿವೃತ್ತ ನೌಕರರ ಸಂಘದ ತಾಲೂಕಾ ಘಟಕ ಸ್ಥಾಪನೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯ ಸರಕಾರದ ಅಡಿಯಲ್ಲಿ ತಮ್ಮ ಸುದೀರ್ಘ ಸೇವೆಯನ್ನು ಸಲ್ಲಿಸಿ ನಿವೃತ್ತರಾದ ನೌಕರರು ತಾಲೂಕಿನಲ್ಲಿ ಸಂಘಟನೆ ಕಟ್ಟಿದ್ದು ಸ್ವಾಗರ್ತಹರ್. ಸಂಘಟನೆಯಿದ್ದರೆ ನಿಮಗೆ ಸಿಗಬೇಕಾದ ಸೌಲಭ್ಯಗಳು ಸಕಾಲಕ್ಕೆ ದೊರೆಯುತ್ತವೆ ಎಂದರು.

ಸರಕಾರಿ ಸೇವೆ ಸಲ್ಲಿಸಿ ನಿವೃತ್ತರಾಗಿ 80 ವರ್ಷಗಳನ್ನು ಪೂರೈಸಿದವರನ್ನು ಸಮಾರಂಭದಲ್ಲಿ ಸನ್ಮಾನಿಸಿದ್ದು ಅತ್ಯಂತ ಮಾದರಿಯಾಗಿದೆ. ಹಿರಿಯ ಜೀವಗಳನ್ನು ಗೌರವಿಸಬೇಕು ಎನ್ನುವುದು ಹಿಂದಿನ ನೌಕರರು ಜ್ಞಾಪಿಸುತ್ತಿದ್ದರು ಎಂದು ಮೆಲಕು ಹಾಕಿದ ಶಾಸಕರು, ಈಗಿನ ಸಂದರ್ಭದಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರು ನಿವೃತ್ತ ನೌಕರರ ಸಲಹೆಗಳನ್ನು ಸ್ವೀಕರಿಸಬೇಕು ಮತ್ತು ಶಿಸ್ತಿನಿಂದ ತಮ್ಮ ಕರ್ತವ್ಯಗಳನ್ನು ನಿಭಾಯಿಸಬೇಕು. ತಾವು ಸಲ್ಲಿಸಿರುವ ಬೇಡಿಕೆಗಳನ್ನು ಸರಕಾರದ ಮಟ್ಟದಲ್ಲಿ ಚರ್ಚಿಸಿ ನಿಮಗೆ ನ್ಯಾಯ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಸಾನ್ನಿಧ್ಯವನ್ನು ಗುರುಪಾದ ಶ್ರೀಗಳು ವಹಿಸಿದ್ದರು. ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಎ.ಎಸ್. ಖತೀಬ ವಹಿಸಿದ್ದರು. ಬಾವಾಸಾಬ ಬೆಟಗೇರಿ, ವ್ಹಿ.ಬಿ. ಸೋಮನಕಟ್ಟಿಮಠ, ಎಲ್. ಎಸ್. ಹಂಚಿನಾಳ, ಸಿ.ಬಿ. ರಡ್ಡೆರ, ವಾಯ್.ಡಿ. ಗಾಣಿಗೇರ, ಸಿ.ಎಸ್. ದಾನಪ್ಪಗೌಡ್ರ ಸೇರಿದಂತೆ ನಿವೃತ್ತ ನೌಕರರು ಪಾಲ್ಗೊಂಡಿದ್ದರು.

### ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮ

## ರಕ್ತದಾನದಿಂದ ಜ್ಞಾಪಕ ಶಕ್ತಿ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಪರ್ಧೆಯಲ್ಲಿ ಸೋಲು-ಗೆಲವು ಮುಖ್ಯವಲ್ಲ, ಭಾಗವಹಿಸುವುದು ಮುಖ್ಯ. ಹೆಚ್‌ಐವಿ ಏಡ್ಸ್ ಸಾಮಾನ್ಯ ಖಾಯಿಲೆಯಾಗಿದ್ದು, ಕೋವಿಡ್‌ನಷ್ಟು ಭಯಾನಕ ಇಲ್ಲ. ಹಾಗೂ ಔಷಧೋಪಚಾರದಿಂದ ಜೀವನಾವಧಿಯನ್ನು ಹೆಚ್ಚಿಗೆ ಮಾಡಬಹುದು ಎಂದು ಡಾ. ಅರುಂಧತಿ ಕುಲಕರ್ಣಿ ತಿಳಿಸಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಗದಗ, ಬಸವೇಶ್ವರ ಹಿರಿಯ ಪ್ರಾಥಮಿಕ-ಪ್ರೌಢಶಾಲೆ ಹಾಗೂ



ಸಾರ್ವಜನಿಕ ಶಿಕ್ಷಣ ಇಲಾಖೆ ಗದಗ ಇವರುಗಳ ಆಶ್ರಯದಲ್ಲಿ ಗದಗ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

18 ವರ್ಷ ತುಂಬಿದವರು, ಹಿಮೋಗ್ಲೋಬಿನ್ ಪ್ರಮಾಣ 12.5 ಮಿ.ಗ್ರಾ ಇರುವವರು ಹಾಗೂ 45 ಕೆ.ಜಿ.ಗಿಂತ ಹೆಚ್ಚಿಗೆ ತೂಕ ಉಳ್ಳವರು ರಕ್ತದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ವಿದ್ಯಾರ್ಥಿಗಳಲ್ಲಿ ಜ್ಞಾಪಕ ಶಕ್ತಿ ವೃದ್ಧಿಸುತ್ತದೆ. ಹೊಸ ರಕ್ತ ಉತ್ಪಾದನೆಯಾಗಲು ಪ್ರೇರಣೆ ಕೊಡುತ್ತದೆ. ಕ್ಯಾನ್ಸರ್ ಮತ್ತು ಹೃದಯದ ಖಾಯಿಲೆಯನ್ನು ತಡೆಗಟ್ಟಬಹುದು. ಹಾಗಾಗಿ ಪ್ರತಿಯೊಬ್ಬರೂ ಜೀವನದಲ್ಲಿ ಒಂದು ಬಾರಿಯಾದರೂ ರಕ್ತದಾನ ಮಾಡಿ ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾ. ಎಸ್. ಆರ್. ಗಿಡ್ಡಕೆಂಚಣ್ಣವರ ಮಾತನಾಡಿ, ಸ್ಪರ್ಧಾಳುಗಳು ಸ್ಫೂರ್ತಿಯಿಂದ ಭಾಗವಹಿಸಿ ಕಾಲೇಜಿಗೆ ಕೀರ್ತಿ ತರಬೇಕು. ವಿದ್ಯಾರ್ಥಿ ಜೀವನ ಅಮೂಲ್ಯವಾದದ್ದು, ವಿದ್ಯಾರ್ಥಿ ಜೀವನದಲ್ಲಿ ಬರುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಗುರಿ ಸಾಧಿಸಲು ತಿಳಿಸಿದರು.

ಬಸವರಾಜ ಲಾಲಗಟ್ಟಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ರಸಪ್ರಶ್ನೆ ಸ್ಪರ್ಧೆಯ ನಿಯಮಗಳು ಹಾಗೂ ಉದ್ದೇಶಗಳನ್ನು ವಿವರಿಸಿ, ಯುವಜನರಲ್ಲಿ ರಕ್ತದಾನದ ಹಾಗೂ ಹೆಚ್‌ಐವಿ ಏಡ್ಸ್ ಬಗ್ಗೆ ಅರಿವು ಮೂಡಿಸುವುದು ಈ ರಸಪ್ರಶ್ನೆ ಸ್ಪರ್ಧೆಯ ಉದ್ದೇಶವಾಗಿದ್ದು, ಹೆಚ್‌ಐವಿ ಏಡ್ಸ್ ನಿಯಂತ್ರಣ ಸೇವೆ, ಸೌಲಭ್ಯ, ಕಳಂಕ ಮತ್ತು ತಾರತಮ್ಯ, ರಾಷ್ಟ್ರೀಯ ಸಹಾಯವಾಣಿ, ಹೆಚ್‌ಐವಿ ಏಡ್ಸ್ ಕಾಯ್ದೆ-2017 ಹಾಗೂ ರಕ್ತದಾನದ ಬಗ್ಗೆ ರಸಪ್ರಶ್ನೆ ಒಳಗೊಂಡಿರುತ್ತದೆ ಎಂದು ಮಾಹಿತಿ ನೀಡಿದರು. ವೇದಿಕೆಯಲ್ಲಿ ಮೌಲ್ಯಮಾಪಕರಾದ ವಿಷಯ ನೀರಿಕ್ಷಣಾಧಿಕಾರಿಗಳಾದ ಲಲಿತಾ ವಂಕ್ಯಾಳ, ಸರೋಜಾ ಬಂಡಿವಡ್ಡರ ಉಪಸ್ಥಿತರಿದ್ದರು. ಭಾಗ್ಯವತಿ ಪಾಟೀಲ ದಾಖಲಾತಿ ನಿರ್ವಹಿಸಿದರು. ಸ್ಪರ್ಧೆಯಲ್ಲಿ ಜಿಲ್ಲೆಯ 41 ಪ್ರೌಢಶಾಲೆಯ ತಂಡಗಳು ಭಾಗವಹಿಸಿದ್ದವು. ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮವನ್ನು ಬಸವರಾಜ ಲಾಲಗಟ್ಟಿ ನಿರ್ವಹಿಸಿದರು. ಸಮಾರಂಭದಲ್ಲಿ ಪ್ರೌಢಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗ, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು. ಸರೋಜಾ ಬಿ.ಪ್ರಾರ್ಥಿಸಿದರು. ಚೆನ್ನಮ್ಮಾ ಶ್ಯಾಡಲಗೇರಿ ವಂದಿಸಿದರು.

ಸ್ಪರ್ಧೆಯಲ್ಲಿ ಸರಕಾರಿ ಪ್ರೌಢಶಾಲೆ ಹೊಳೆಮಣ್ಣೂರ ವಿದ್ಯಾರ್ಥಿನಿಯರಾದ ಭುವನೇಶ್ವರ ಆದಿ, ಸಂಗೀತಾ ಮುಳ್ಳೂರ-ಪ್ರಥಮ, ಸರಕಾರಿ ಆದರ್ಶ ವಿದ್ಯಾಲಯ ಇಟಗಿಯ ಸುನೀತಾ ಕುಸುಗಲ್, ಕಾರ್ತಿಕ ಹಿರೇಮಠ ದ್ವಿತೀಯ, ಪಾರ್ಶ್ವನಾಥ ಪ್ರೌಢಶಾಲೆಯ ಶ್ರೇಯಸ್, ವಿಕಾಸ- ತೃತೀಯ, ಹಾಗೂ ಸಮಾಧಾನಕರ ಬಹುಮಾನವನ್ನು ಸೇಂಟ್‌ಜಾನ್ ಪ್ರೌಢಶಾಲೆಯ ತೇಜಸ್ವಿನಿ, ಜೆಸ್ಸಿಕಾ ಪಡೆದುಕೊಂಡರು. ವಿಜೇತರಿಗೆ ಪ್ರಶಸ್ತಿ ಪತ್ರ ಮತ್ತು ಕ್ರಮವಾಗಿ 6 ಸಾವಿರ ರೂ., 5 ಸಾವಿರ ರೂ., 4 ಸಾವಿರ ರೂ., ಸಮಾಧಾನಕರ 3 ಸಾವಿರ ರೂ ವಿತರಿಸಲಾಯಿತು.

## ಸಂಪಾದಕೀಯ

# ಬಹುಮತ ತಂದ ಮುಜುಗರ

ಪಂಚ ಗ್ಯಾರಂಟಿಗಳ ಘೋಷಣೆಯಿಂದ ಭಾರಿ ಬಹುಮತದೊಂದಿಗೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷಕ್ಕೆ ಈಗ ಸ್ವ ಪಕ್ಷೀಯರಿಂದ ಮುಜುಗರ ಅನುಭವಿಸುವಂತಾಗಿದೆ. ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ತಲೆದಂಡ ಹತ್ತಿರವಾಗುತ್ತಿದ್ದಂತೆ ಕಾಂಗ್ರೆಸ್ ನಲ್ಲಿ ಮುಖ್ಯಮಂತ್ರಿ ಸ್ಥಾನದ ಮೇಲೆ ಕಣ್ಣಿಟ್ಟವರು ನೀಡುತ್ತಿರುವ ಹೇಳಿಕೆ, ಪಕ್ಷಕ್ಕೆ ಮುಜುಗರ ತರುವಂತಾಗಿದೆ.

ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಪಾತ್ರ ಸ್ಪಷ್ಟವಾಗಿಲ್ಲ. ಸಿದ್ದರಾಮಯ್ಯ ರಾಜೀನಾಮೆ ಕೊಡಲೇಬೇಕು ಎಂದು ಕಾಂಗ್ರೆಸ್ ಹೈಕಮಾಂಡ್ ಇನ್ನೂ ಸ್ಪಷ್ಟವಾಗಿ ಹೇಳಿಲ್ಲ. ಅದಾಗಿಯೂ ಕಾಂಗ್ರೆಸ್ಸಿನ ಕೆಲ ಹಿರಿಯ ನಾಯಕರು ಸಿಎಂ ಸ್ಥಾನದ ಆಕಾಂಕ್ಷಿಗಳಾಗಿ ಬಹಿರಂಗ ಹೇಳಿಕೆ ನೀಡುತ್ತಿರುವುದು ಗ್ಯಾರಂಟಿ ಸರ್ಕಾರಕ್ಕೆ ತಲೆನೋವಾಗಿ ಪರಿಣಮಿಸಿದೆ.

ಸಚಿವರಾದ ಸತೀಶ್ ಜಾರಕಿಹೊಳಿ, ಎಂ.ಬಿ. ಪಾಟೀಲ್, ಜಿ ಪರಮೇಶ್ವರ್, ಡಿಸಿಎಂ ಡಿ.ಕೆ. ಶಿವಕುಮಾರ ಮತ್ತು ಹಿರಿಯ ನಾಯಕ ಆರ್.ವಿ. ದೇಶಪಾಂಡೆ ಅವರೂ ಸಿಎಂ ಸ್ಥಾನದ ಆಕಾಂಕ್ಷಿಗಳಾಗಿರುವುದನ್ನ ಬಹಿರಂಗವಾಗಿಯೇ ಒಪ್ಪಿಕೊಂಡಿದ್ದಾರೆ.

ಅದಕ್ಕಿಂತ ಮುಖ್ಯವಾಗಿ ದೆಹಲಿ ಮಟ್ಟದಲ್ಲಿ ತಮ್ಮದೇಯಾದ ಲಾಬಿ ನಡೆಸಿ, ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ಚರ್ಚಿಸಿರುವುದು ರಾಜ್ಯ ರಾಜಕಾರಣದಲ್ಲಿ ಸಂಚಲನ ಸೃಷ್ಟಿಸಿದೆ. ಕಾಂಗ್ರೆಸ್ ನಾಯಕರು ಈ ರಾಜಕೀಯ ಹೇಳಿಕೆಗಳು ಪ್ರತಿಪಕ್ಷಗಳಿಗೆ ಆಹಾರವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಕೊಡುವುದು ನಿಶ್ಚಿತ. ಆ ಕಾರಣಕ್ಕಾಗಿಯೇ ಕಾಂಗ್ರೆಸ್ ನಾಯಕರು ಮುಖ್ಯಮಂತ್ರಿ ಸ್ಥಾನದ ಆಕಾಂಕ್ಷೆಯನ್ನು ವ್ಯಕ್ತಪಡಿಸಿದ್ದಾರೆ ಎಂದು ಪ್ರತಿಪಕ್ಷಗಳ ನಾಯಕರು ಟೀಕೆ ಆರಂಭಿಸಿದ್ದಾರೆ. ಪ್ರತಿಪಕ್ಷಗಳ ಈ ವಾಗ್ದಾಳಿಯಿಂದ ಕಾಂಗ್ರೆಸ್ ನಲ್ಲಿ ಅಸಮಾಧಾನ ಬಲಗೊಳ್ಳಲು ಕಾರಣವಾಗುತ್ತಿದೆ.

136 ಸ್ಥಾನಗಳನ್ನ ಗೆದ್ದು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ, ಇವತ್ತು ಒಂದು ಸಣ್ಣ ಹಗರಣದಿಂದಾಗಿ ಇಕ್ಕಟ್ಟಿಗೆ ಮಾತ್ರವಲ್ಲದೆ ಮುಜುಗರಕ್ಕೂ ಈಡಾಗುತ್ತಿರುವುದು ಆಶ್ಚರ್ಯ ತರಿಸಿದೆ.

# ಕ್ರಿಯಾಯೋಜನೆ ರದ್ದುಪಡಿಸದಿರಲು ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುರಸಭೆಯ 15ನೇ ಹಣಕಾಸಿನ 76 ಲಕ್ಷ ರೂಗಳ ಅನುದಾನದ ಕಾಮಗಾರಿಯ ಕ್ರಿಯಾಯೋಜನೆಯನ್ನು ಯಾವುದೇ ಕಾರಣಕ್ಕೂ ರದ್ದುಪಡಿಸಬಾರದು ಎಂದು ಪುರಸಭೆ ಸದಸ್ಯರಾದ ಪ್ರವೀಣ ಬಾಳಿಕಾಯಿ, ಅಶ್ವಿನಿ ಅಂಕಲಕೋಟಿ ಒತ್ತಾಯಿಸಿದರು.

ಪುರಸಭೆಯಲ್ಲಿ ನಡೆದ ವಿಶೇಷ ಸಾಮಾನ್ಯ ಸಭೆಯಲ್ಲಿ ಅನುಮೋದನೆಗೊಂಡು ಟೆಂಡರ್ ಆಗಿರುವ ಕ್ರೀಯಾಯೋಜನೆಯನ್ನು ಆಡಳಿತ ಪಕ್ಷದವರು ರದ್ದುಪಡಿಸುವ ನಿರ್ಣಯ ತೆಗೆದುಕೊಂಡ ಹಿನ್ನೆಲೆಯಲ್ಲಿ ಸಭೆಯು ಮುಕ್ತಾಯಗೊಂಡ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಕ್ರಿಯಾಯೋಜನೆ ಅನುಮೋದನೆ ಆಗುವಾಗ ಪುರಸಭೆಯಲ್ಲಿ ಅಧ್ಯಕ್ಷ-ಉಪಾಧ್ಯಕ್ಷರ ಆಡಳಿತ ಇರಲಿಲ್ಲ. ಆಗ ಸಿದ್ಧಗೊಂಡ ಕ್ರಿಯಾಯೋಜನೆ ಈಗಾಗಲೇ ಅನುಮೋದನೆಗೊಂಡು ಟೆಂಡರ್ ಕೂಡ ಕರೆಯಲಾಗಿದೆ. ಆದರೆ ಆಡಳಿತ ಪಕ್ಷದ ಸದಸ್ಯರು ಕ್ರಿಯಾಯೋಜನೆ ರದ್ದು ಮಾಡುವಂತೆ ಆಗ್ರಹಿಸುತ್ತಿದ್ದಾರೆ. ಕಾರಣ ಪುರಸಭೆ ಅಧಿಕಾರಿಗಳು ಯಾವುದೇ ಕಾರಣಕ್ಕೂ ಕ್ರಿಯಾಯೋಜನೆ ರದ್ದುಪಡಿಸಬಾರದು. ಚಾವಡಿಯಿಂದ ಕೆಂಚಲಾಪುರದವರೆಗೆ ಅಪೂರ್ಣಗೊಂಡ ಸಿಸಿ ರಸ್ತೆಯನ್ನು ಮುಂದಿನ ಅನುದಾನದಲ್ಲಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಹಿಂದೆ ಪೌರಾಡಳಿತ ಸಚಿವ ಯು.ಟಿ. ಖಾದರ್ ಅವರು ಪಟ್ಟಣಕ್ಕೆ ಬಂದ ಸಂದರ್ಭದಲ್ಲಿ ಅಪೂರ್ಣಗೊಂಡ ಸಿಸಿ ರಸ್ತೆ ಮತ್ತು ಊರಿನ ಅಭಿವೃದ್ಧಿಗೆ ಐದು ಕೋಟಿ ಅನುದಾನ ನೀಡುವುದಾಗಿ ತಿಳಿಸಿದ್ದಾರೆ. ಸಚಿವರು ಆಶ್ವಾಸನೆ ನೀಡಿದ್ದರೂ ಸಹ ಅವರಿಗೆ ತಮ್ಮ ಕಾಂಗ್ರೆಸ್ ಪಕ್ಷದ ಸಚಿವರ ಮೇಲೂ ವಿಶ್ವಾಸ ಇಲ್ಲ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಸದಸ್ಯರಾದ ವಾಣಿ ಹತ್ತಿ, ಪೂರ್ಣಿಮಾ ಪಾಟೀಲ, ಮಹಾದೇವಪ್ಪ ಅಣ್ಣಿಗೇರಿ, ಕವಿತಾ ಶೆರಸೂರಿ, ಪೂಜಾ ಖರಾಟೆ ಇದ್ದರು.

# ಚಪ್ಪರಬಂದ್ ಸಮಾಜದಿಂದ ವಿಮುಕ್ತ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಚಪ್ಪರಬಂದ್ ಸಮುದಾಯದ ಜನ ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯರಾಗಿ ಭಾಗವಹಿಸಿದ್ದರೂ ಅವರನ್ನು ಅಪರಾಧಿ ಬುಡಕಟ್ಟು ಕಾಯಿದೆಯಿಂದ 1952ರ ಆಗಸ್ಟ್ 31ರಂದು ಮುಕ್ತಗೊಳಿಸಲಾಯಿತು. ಆ ಕಾರಣಕ್ಕಾಗಿ ಪ್ರತಿ ವರ್ಷ ಆಗಸ್ಟ್ 31ರಂದು ವಿಮುಕ್ತ ದಿನವನ್ನಾಗಿ ಆಚರಿಸಲಾಗುತ್ತದ್ದೆಂದು ಕರ್ನಾಟಕ ಅಲೆಮಾರಿ ವಿಮುಕ್ತ ಬುಡಕಟ್ಟು ಚಪ್ಪರಬಂದ್ ಸಮಾಜ ಸಂಘದ ಜಿಲ್ಲಾಧ್ಯಕ್ಷ ಗೈಬುಸಾಬ (ಬಿ.ಬಾಬು) ಹೇಳಿದರು.

ಬೆಟಗೇರಿಯ ಸೆಟ್ಲಮೆಂಟ್‌ನಲ್ಲಿ ನಡೆದ 73ನೇ ವಿಮುಕ್ತ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮೂಲತಃ ಅಲೆಮಾರಿಗಳಾದ ಚಪ್ಪರಬಂದ್ ಸಮುದಾಯದ ಜನ, ಈಗಲೂ ಬುಡಕಟ್ಟು ಸಂಸ್ಕೃತಿ, ಆಚರಣೆ, ಸಂಪ್ರದಾಯ ಮತ್ತು ಭಾಷೆಯನ್ನು ಉಳಿಸಿ ಮುನ್ನಡೆಯುತ್ತಿದೆ ಎಂದು ಹೇಳಿದರು.

ಚಪ್ಪರಬಂದ್ ಸಮುದಾಯ ಬುಡಕಟ್ಟು ಸಮಾಜಕ್ಕೆ ಸೇರಿದ್ದರೂ ಸರಕಾರದ ಸೌಲಭ್ಯಗಳಿಂದ ವಂಚಿತವಾಗಿದೆ. ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿಯೂ ಸೇರ್ಪಡೆಯಾಗಿಲ್ಲ. ಕನಿಷ್ಠ ಅಲೆಮಾರಿಗಳ ಪಟ್ಟಿಯಲ್ಲೂ ಸ್ಥಾನ ಪಡೆಯಲು ಸಾಧ್ಯವಾಗಿಲ್ಲ. ರಾಜ್ಯ ಸರಕಾರ ಚಪ್ಪರಬಂದ್ ಸಮುದಾಯವನ್ನು ಅಲೆಮಾರಿ ಪಟ್ಟಿಯಲ್ಲಿ ಸೇರ್ಪಡೆ ಮಾಡುವ ಜೊತೆಗೆ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ಪ್ರಮುಖರಾದ ಇಮಾಮಸಾಬ ಹುಲ್ಲೂರ, ಹುಸೇನಸಾಬ ಚಪ್ಪರಬಂದ್, ಇಮಾಮಸಾಬ ಮುಜಾವರ, ಶಿವರಾಜ ಕೊರಸ, ನಗರಸಭೆ ಸದಸ್ಯ ಸುರೇಶ ಕಟ್ಟಿಮನಿ, ಜಮಾಲಸಾಬ ಸಿಂದಗಿ, ಬಶೀರ ಸಂಕನಾಳ, ಹುಸೇನಸಾಬ ರಾಜನಾಳ, ಇಮಾಮಸಾಬ ವಡ್ಡೊಡಗಿ, ಯಾಸೀನ್ ಬಾಗೇವಾಡಿ, ಯಾಸೀನ್ ಫಾರೂಕ್ ಸಿಂದಗಿ, ಅಬ್ದುಲ್ ವಡ್ಡೊಡಗಿ, ನಬಿರಸೂಲ ಕೊಪ್ಪ, ಜಾವೇದ ಬಳಬಟ್ಟಿ ಹಾಗೂ ಇತರರು ಉಪಸ್ಥಿತರಿದ್ದರು. ಎಸೆಸೆಲ್ಸಿ, ಪಿಯುಸಿ ಮತ್ತು ಪದವಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

## ರೇಣುಕ ವಿಜಯ ಪುರಾಣ ಪ್ರವಚನ ಮಂಗಲ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಜೀವನ ಮೌಲ್ಯಗಳಿಂದ ಬದುಕು ಉಜ್ವಲ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಭೌತಿಕ ಬದುಕಿಗೆ ಆಧ್ಯಾತ್ಮ ಜ್ಞಾನ ಅವಶ್ಯಕ. ಸತ್ಯ ಮತ್ತು ಪ್ರಾಮಾಣಿಕತೆಗಿಂತ ಉದಾತ್ತವಾದ ಧರ್ಮ ಇನ್ನೊಂದಿಲ್ಲ. ಜೀವನ ಮೌಲ್ಯಗಳು ಉಳಿದು-ಬೆಳೆದು ಬಂದರೆ ಬದುಕು ಉಜ್ವಲಗೊಳ್ಳುತ್ತದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಕೈಗೊಂಡ 33ನೇ ವರ್ಷದ ಶ್ರಾವಣ ತಪೋನುಷ್ಠಾನ ಹಾಗೂ ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನ ಮಂಗಲ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಂಪತ್ತು ಬೆಳೆದಂತೆಲ್ಲ ಮಾನವೀಯ ಸಂಬಂಧಗಳು ಸಡಿಲಗೊಳ್ಳಬಾರದು. ಗುರು ಬೋಧದಿಂದ ಮನ ಅರಳಿ, ಭಾವ ಕುಸುಮ ವಿಕಾಸಗೊಳ್ಳುತ್ತದೆ. ತನಗಾಗಿ ಬಯಸುವುದು ಜೀವ ಗುಣವಾದರೆ ಎಲ್ಲರಿಗಾಗಿ ಬಯಸುವುದು ದೈವ ಗುಣವಾಗಿದೆ. ಕಾಯಿಸಿದ ಚಿನ್ನ ಒಡವೆಯಾಗುತ್ತದೆ.

ಬಡಿದ ತಾಮ್ರ ತಂತಿಯಾಗುತ್ತದೆ. ಕೆತ್ತಿದ ಕಲ್ಲು ಸುಂದರ ಮೂರ್ತಿಯಾಗುತ್ತದೆ. ಜೀವನದಲ್ಲಿ ಕಷ್ಟಗಳು ಹೆಚ್ಚಾದಷ್ಟು ಜೀವನ ಮೌಲ್ಯ ವೃದ್ಧಿಸುತ್ತವೆ. ತತ್ವವನ್ನರಿತವನಿಗೆ ಸತ್ಯದ ಬೆಳಕು ಗೋಚರಿಸುತ್ತದೆ.

ವೀರಶೈವ ಧರ್ಮ ಶಾಸ್ತ್ರದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಚಿಂತನಗಳು ಬದುಕಿ ಬಾಳುವ ಜನ ಸಮುದಾಯಕ್ಕೆ ಆಶಾಕಿರಣವಾಗಿವೆ.

ಅವರ ವಿಶ್ವ ಬಂಧುತ್ವದ ವಿಚಾರ ಧಾರೆಗಳು ಸಮುದಾಯದ ಶ್ರೇಯಸ್ಸಿಗೆ ಸ್ಫೂರ್ತಿಯಾಗಿವೆ ಎಂದರು.

ಶ್ರೀ ರಂಭಾಪುರಿ ಲಿಂ.ಜಗದ್ಗುರು ವೀರರುದ್ರಮುನಿ ಶಿವಾಚಾರ್ಯ ಭಗವತ್ಪಾದರು 1924ರಲ್ಲಿ ಜನ್ಮ ತಾಳಿದರು. ಅವರು ಬದುಕಿ ಬಾಳಿದ್ದರೆ 2024ನೇ ಇಸ್ವಿಗೆ ಜನ್ಮ ಶತಮಾನೋತ್ಸವ ಆಚರಿಸಿಕೊಳ್ಳುವ



ಯೋಗ ಬರುತ್ತಿತ್ತು. 1991ರಲ್ಲಿ 67ನೇ ವಯಸ್ಸಿನಲ್ಲಿ ಅವರು ಶಿವ ಸಾಯುಜ್ಯವನ್ನು ಹೊಂದಿದರು. ನೂರು ವರುಷದ ಸವಿ ನೆನಪಿಗಾಗಿ ಅವರ ಜನ್ಮ ಶತಮಾನೋತ್ಸವ ನಮ್ಮ ಸಂಸ್ಥೆಗಳ ಸಹಕಾರದಿಂದ ದಿನಾಂಕ 15-12-2024 ಭಾನುವಾರದಂದು ಒಂದು ದಿನದ ಕಾರ್ಯಕ್ರಮ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ನಡೆಸಲಾಗುವುದೆಂದು ಶ್ರೀ ರಂಭಾಪುರಿ ಜಗದ್ಗುರುಗಳು ಪುರಾಣ ಮಂಗಲ ಸಮಾರಂಭದಲ್ಲಿ ಪ್ರಕಟಪಡಿಸಿದರು.

ಶ್ರೀ ಪೀಠದಲ್ಲಿ ಒಂದು ತಿಂಗಳ ಕಾಲ ಪೂಜಾನುಷ್ಠಾನ ಕೈಗೊಂಡ ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳವರಿಗೆ 'ತಪೋ ಭೂಷಣ' ಪ್ರಶಸ್ತಿ, ಫಲ-ಪುಷ್ಪಗಳನ್ನಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ಬೆಂಗಳೂರು ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಪ್ರಭುದೇವ ಕಲ್ಮಠ ಅವರ 71ನೇ ಜನ್ಮ ದಿನೋತ್ಸವ ನಿಮಿತ್ತ ಶ್ರೀ ರಂಭಾಪುರಿ ಜಗದ್ಗುರುಗಳು ನೂತನ ವಸ್ತ್ರಗಳನ್ನು ಹೊದೆಸಿ ಸ್ಮರಣಿಕೆ ನೀಡಿ ದಂಪತಿಗಳಿಗೆ ಶುಭ ಹಾರೈಸಿದರು.

ನೇತೃತ್ವ ವಹಿಸಿದ ಹುಡುಗಿ ವಿರೂಪಾಕ್ಷಲಿಂಗ ಶಿವಾಚಾರ್ಯರು ಮಾತನಾಡಿ, ಸುಳ್ಳು ಹೇಳಲು ಹಲವು ದಾರಿ. ಆದರೆ ಸತ್ಯ ಹೇಳಲು ಇರುವುದೊಂದೇ ದಾರಿ. ವಿವೇಕ, ಧೈರ್ಯ, ಸ್ನೇಹ ಇವು ವ್ಯಾಧಿಗಳಿಗೆ ದಿವ್ಯೌಷಧ. ಶ್ರಾವಣ ಒಂದು ತಿಂಗಳ ಕಾಲ ಪವಿತ್ರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ತಾವು ನೆಲೆಸಿರುವುದು ಪೂರ್ವ ಜನ್ಮದ ಸುಕೃತವೆಂದರು.

ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನ ಮಾಡಿದ ಉಟಗಿ ಹಿರೇಮಠದ ಶಿವಪ್ರಸಾದ ದೇವರು ಮಾತನಾಡಿ, ಬಲ್ಲವರ ಬೆಲ್ಲದಂತಹ ಮಾತಿಗೆ ಮೌಲ್ಯವನ್ನಿತ್ತು ಬಾಳನ್ನು ಕಟ್ಟಿಕೊಳ್ಳಲು ಗಟ್ಟಿ ನಿರ್ಧಾರ ಮಾಡಬೇಕಾಗಿದೆ. ಹೊಟ್ಟೆಗೆ ಕಟ್ಟಿದ ಬುತ್ತಿ ಹಳಸುತ್ತದೆ. ನೆತ್ತಿಗೆ ಕಟ್ಟಿದ ಬುತ್ತಿ ಹುಲುಸಾಗಿ ಬೆಳೆಯುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜೀವನ ಸಂದೇಶ ಸಕಲರಿಗೂ ಒಳಿತನ್ನು ಉಂಟು ಮಾಡುತ್ತವೆ. ಒಂದು ತಿಂಗಳ ಕಾಲ ಶ್ರೀ ಪೀಠದಲ್ಲಿ ಪುರಾಣ ಪ್ರವಚನ ಕಾರ್ಯ ನನ್ನ ಪಾಲಿಗೆ ಬಂದ ಬಹು ದೊಡ್ಡ ಸೌಭಾಗ್ಯವಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ನಮ್ಮ ನಿಮ್ಮೆಲ್ಲರ ಮೇಲೆ ಸದಾ ಇರಲೆಂದರು.

ಮಾಜಿ ಶಾಸಕ ಜಿ.ಎಸ್. ಗಡ್ಡದ್ದೇವರಮಠ, ಗುರುಕುಲದ ಕುಲಪತಿ ಸಿದ್ಧಲಿಂಗಯ್ಯ ಹಿರೇಮಠ, ಪ್ರಭುದೇವ ಕಲ್ಮಠ, ಚಂದ್ರಶೇಖರ, ವಿಶ್ವನಾಥ ದೇವರು, ಮಲೆಬೆನ್ನೂರಿನ ಜಗದೀಶ ಸಹೋದರರು, ದಾವಣಗೆರೆ ಡಾ. ರೇಣುಕಾರಾಧ್ಯ, ಗುಡದೂರು ವೀರೇಶ್ವರಸ್ವಾಮಿ, ಶಿವಕಾಂತಾರಾಧ್ಯ - ಗುರುಕಾಂತಾರಾಧ್ಯ ಸಹೋದರರು, ತುಮಕೂರಿನ ಸದ್ಭಕ್ತರು ಸೇರಿ ಹಲವಾರು ಗಣ್ಯರು ಉಪಸ್ಥಿತರಿದ್ದರು. ಗುರುಕುಲ ಸಾಧಕರಿಂದ ವೇದಘೋಷ, ಗಂಗಾಧರ ಹಿರೇಮಠರಿಂದ ಭಕ್ತಿ ಗೀತೆ ಜರುಗಿತು.

ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

ಕಾರ್ಯಕ್ರಮದ ನಂತರ ಅನ್ನ ದಾಸೋಹ ಜರುಗಿತು.

ಬೆಳಿಗ್ಗೆ ಕ್ಷೇತ್ರದ ಎಲ್ಲ ದೈವಗಳಿಗೆ ಶ್ರಾವಣ ಮಾಸ ಅಮಾವಾಸ್ಯೆ ಪವಿತ್ರ ಸಂದರ್ಭದಲ್ಲಿ ವಿಶೇಷ ಪೂಜೆ ನೆರವೇರಿತು.

## ಸದಸ್ಯತ್ವ ಅಭಿಯಾನ ಕಾರ್ಯಾಗಾರದಲ್ಲಿ ಹಿರಿಯ ಧುರೀಣ ವಸಂತ ಮೇಟಿ

# ಸದಸ್ಯತ್ವ ಅಭಿಯಾನದಲ್ಲಿ ಭಾಗಿಯಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವದಲ್ಲಿಯೇ 10.50 ಕೋಟಿಯಷ್ಟು ಸದಸ್ಯರನ್ನು ಹೊಂದಿರುವ ಭಾರತೀಯ ಜನತಾ ಪಕ್ಷವು ಪಕ್ಷ, ಜಾತಿ ಮತ್ತು ಅಧಿಕಾರದ ಬೆನ್ನತ್ತದೇ ದೇಶದ ಭದ್ರತೆ ಮತ್ತು ರಾಷ್ಟ್ರೀಯ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಸೇವೆ ಮಾಡುತ್ತಿದೆ ಎಂದು ಬಿಜೆಪಿ ಹಿರಿಯ ಧುರೀಣ ವಸಂತ ಮೇಟಿ ಹೇಳಿದರು.

ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಲಕ್ಕುಂಡಿ ಬಿಜೆಪಿ ಮಂಡಲದ ಸದಸ್ಯತ್ವ ಅಭಿಯಾನದಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಾಗಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಈಗ ಕಮ್ಯೂನಿಸ್ಟ್ ಪಕ್ಷವನ್ನು ಮೀರಿ ಈಗ 10.50 ಕೋಟಿ ಕಾರ್ಯಕರ್ತರನ್ನು ಹೊಂದಿ ವಿಶ್ವದಲ್ಲಿಯೇ ಪ್ರಥಮದಲ್ಲಿದೆ. ಭಾರತ ಮತ್ತು ವಿದೇಶದಲ್ಲಿಯ ಭಾರತೀಯರು ಸಹ ಈ ಪಕ್ಷದ ಸದಸ್ಯರಾಗಿರುವುದು ಹೆಮ್ಮೆಯ ಸಂಗತಿ. ಕಳೆದ ಚುನಾವಣೆಯಲ್ಲಿ ಕರ್ನಾಟದಲ್ಲಿ ಆಕಸ್ಮಿಕವಾಗಿ ವಿಚಿತ್ರವಾದ ಪರಿಸರ ನಿರ್ಮಾಣವಾಗಿ ಪಕ್ಷಕ್ಕೆ ಹಿನ್ನೆಡೆಯಾಗಿದೆ. ಇದಕ್ಕೆ ಎದೆಗುಂದದೇ ಕಾರ್ಯಕರ್ತರು ಸದಸ್ಯತ್ವ ಅಭಿಯಾನದಲ್ಲಿ ಭಾಗಿಯಾಗಿ ಹೆಚ್ಚೆಚ್ಚು ಸದಸ್ಯರನ್ನು ನೇಮಿಸಬೇಕು ಎಂದು ಸಲಹೆ ನೀಡಿದರು.




ಅಧ್ಯಕ್ಷತೆ ವಹಿಸಿದ್ದ ಲಕ್ಕುಂಡಿ ಮಂಡಲದ ಅಧ್ಯಕ್ಷ ನಿಂಗಪ್ಪ ಮಣ್ಣೂರು, ಪಕ್ಷದ ಹಿರಿಯ ಧುರೀಣ ಪ್ರದೀಪ ನವಲಗುಂದ ಮಾತನಾಡಿದರು. ಪಕ್ಷದ ಹಿರಿಯ ಮುಖಂಡ ಈಶಪ್ಪ ನಾಯ್ಕರ, ಮಹಿಳಾ ಮೋರ್ಚಾ ಪ್ರದಾನ ಕಾರ್ಯದರ್ಶಿ ಲಕ್ಷ್ಮೀ ಕುಂಬಾರ ಲಕ್ಕುಂಡಿ ಮಂಡಲದ 32 ಗ್ರಾಮದ ಬೂತ್ ಅಧ್ಯಕ್ಷರು, ಶಕ್ತಿ ಕೇಂದ್ರದ ಪ್ರಮುಖರು, ಮಹಾಶಕ್ತಿ ಕೇಂದ್ರದ ಪ್ರಮುಖರು, ಮಂಡಲದ ಸದಸ್ಯರು ಬಾಗವಹಿಸಿದ್ದರು. ನಾರಾಯಣಗೌಡ ಮೇಟಿ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಬಸವರಾಜ ಬಡಿಗೇರ ನಿರೂಪಿಸಿದರು. ಕಾಸೀಂಸಾಬ ನದಾಫ್ ವಂದಿಸಿದರು.

ಬಿಜೆಪಿ ಜಿಲ್ಲಾ ಕೋಶಾಧ್ಯಕ್ಷ, ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿ ನಾಗರಾಜ ಕುಲಕರ್ಣಿ ಮಾತನಾಡಿ, ಜಗತ್ತಿನಲ್ಲಿಯೇ ಹೆಚ್ಚು ಸದಸ್ಯರನ್ನು ಹೊಂದಿರುವ ಬಿಜೆಪಿ ಅಧಿಕ ಕಾರ್ಯಕರ್ತರನ್ನು ಹೊಂದಿದ ಪ್ರಥಮ ಪಕ್ಷವಾಗಿದೆ. ಇದು ಪಕ್ಷದ ಪ್ರಮುಖರಾದ ಮೋದಿಯವರು, ಅಮಿತ ಷಾ ಹಾಗೂ ರಾಜನಾಥ ಸಿಂಗ್ ಅವರಿಂದ ಮಾತ್ರವಾಗಿಲ್ಲ. ಬೂತ್ ಮಟ್ಟದ ಸಾಮಾನ್ಯ ಕಾರ್ಯಕರ್ತರಿಂದ ಸಾಧ್ಯವಾಗಿದೆ. ಈ ದಿಸೆಯಲ್ಲಿ ಒಬ್ಬ ವ್ಯಕ್ತಿಯ ಹೆಸರನ್ನೇ ಹೇಳುತ್ತಾ ಚುನಾವಣೆಗೆ ಹೋಗುವುದು ಅಷ್ಟು ಸಮಂಜಸವಲ್ಲ. ಆದ್ದರಿಂದ ಭೂತ್ ಮಟ್ಟದಲ್ಲಿರುವ ಕಾರ್ಯಕರ್ತರು ಸಾಮಾಜಿಕ ಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಾಗ ನಾಯಕರಾಗಿ ಬೆಳೆಯಬಹುದು. ವಿಶ್ವದಲ್ಲಿಯೇ ವ್ಯವಸ್ಥಿತ ಮತ್ತು ಶಿಸ್ತುಭದ್ಧವಾದ ಪಕ್ಷ ಬಿಜೆಪಿ. ದೀನದಯಾಳ ಉಪಾಧ್ಯಾಯರು ಹಾಗೂ ಶ್ಯಾಮಪ್ರಸಾದ ಮುಖರ್ಜಿಯವರು ಈ ಪಕ್ಷವನ್ನು ಕಟ್ಟಿ ಬೆಳೆಸಿದ್ದಾರೆ. ದೇಶದಲ್ಲಿ 10.50 ಲಕ್ಷ ಬೂತ್‌ಗಳಿದ್ದು, ಪ್ರತಿ ಬೂತ್‌ನಲ್ಲಿ 300 ಸದಸ್ಯರನ್ನು ಮಾಡುವ ಗುರಿ ಹೊಂದಲಾಗಿದೆ ಎಂದರು.

## ಪುರಸಭೆಯ ಸಾಮಾನ್ಯ ಸಭೆಯಲ್ಲಿ ಆಡಳಿತ-ವಿರೋಧ ಪಕ್ಷಗಳ ಸದಸ್ಯರ ನಡುವೆ ಬಿಸಿಬಿಸಿ ಚರ್ಚೆ

# ನೀರು ಸರಬರಾಜಿನಲ್ಲಿ ನಿರ್ವಹಣೆ ಕೊರತೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯಲ್ಲಿ ಸೋಮವಾರ ನಡೆದ ಪುರಸಭೆಯ ಸಾಮಾನ್ಯ ಸಭೆಯಲ್ಲಿ ಆಡಳಿತ ಮತ್ತು ವಿರೋಧ ಪಕ್ಷಗಳ ಸದಸ್ಯರ ನಡುವೆ ಕಾವೇರಿದ ಚರ್ಚೆಗಳು ನಡೆದು ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಪ್ರತ್ಯೇಕ ಮನವಿ ಸಲ್ಲಿಸಿದರು.

ಸಭೆ ಆರಂಭವಾಗುತ್ತಿದ್ದಂತೆ ಸದಸ್ಯ ಪ್ರವೀಣ ಬಾಳಿಕಾಯಿ ಹಾಗೂ ಸದಸ್ಯರು ನೂತನ ಅಧ್ಯಕ್ಷ-ಉಪಾಧ್ಯಕ್ಷರನ್ನು ಅಭಿನಂದಿಸಿದ ಬಳಿಕ ಮಾತನಾಡಿ, ಪಟ್ಟಣದಲ್ಲಿ ನೀರು ಸರಬರಾಜು ವಿಷಯಕ್ಕೆ ಸಂಬಂಧಿಸಿದಂತೆ ನಿರ್ವಹಣೆಯ ಕೊರತೆ ಎದ್ದು ಕಾಣುತ್ತಿದೆ. ಮಳೆಗಾಲದಲ್ಲೂ 15-20 ದಿನಗಳಿಗೊಮ್ಮೆ ನೀರು ಸರಬರಾಜಾಗುತ್ತಿದೆ. ನೀರು ಸರಬರಾಜಿಗಾಗಿ ಯಥೇಚ್ಛವಾಗಿ ಜನರಲ್ ಫಂಡ್‌ನಿಂದ ಖರ್ಚು ಮಾಡಲಾಗುತ್ತಿದೆ. ಆದರೂ ಏಕೆ ಸರಿಯಾಗಿ ನೀರು ಪೂರೈಕೆ ಮಾಡಲಾಗುತ್ತಿಲ್ಲ ಎಂದು ಆರೋಪಿಸಿದರು.

ಬಳಿಕ 15ನೇ ಹಣಕಾಸು, ಸಾಮಾನ್ಯ ಮೂಲ ಅನುದಾನದಲ್ಲಿ ಮುಕ್ತ ನಿಧಿಯ ಒಟ್ಟು 76 ಲಕ್ಷ ರೂಗಳಲ್ಲಿ ರಸ್ತೆ ಕಾಮಗಾರಿಗೆ ಕರೆಯಲಾಗಿದ್ದ ಟೆಂಡರ್ ರದ್ದುಪಡಿಸಿ ಬದಲಿ ಕಾಮಗಾರಿಗೆ ಹೊಸ ಕ್ರಿಯಾಯೋಜನೆ ರೂಪಿಸುವ ಕುರಿತು



ಬಿಸಿಬಿಸಿ ಚರ್ಚೆಗಳು ನಡೆದವು. ಪಟ್ಟಣದ ಹಾವಳಿ ಆಂಜನೆಯ ದೇವಸ್ಥಾನದಿಂದ ಕೆಂಚಲಾಪೂರ ಶಾಲೆಯವರೆಗಿನ ರಸ್ತೆಯನ್ನು ನಿರ್ಮಿಸಲು ಅನೇಕ ಸಂಘಟನೆಗಳು, ಸಾರ್ವಜನಿಕರು ಒತ್ತಾಯಿಸಿದ್ದು, ಅದೇ ರಸ್ತೆಗೆ ಮರು ಟೆಂಡರ್ ಕರೆಯುವಂತೆ ಆಡಳಿತ ಪಕ್ಷದವರು ಒತ್ತಾಯಿಸಿದರು. ಇದನ್ನು ಒಪ್ಪದ ವಿರೋದ ಪಕ್ಷಗಳ ಸದಸ್ಯರು ಈ ರಸ್ತೆ ಪೂರ್ಣಗೊಳಿಸುವದಕ್ಕೆ ನಮ್ಮದು ಯಾವುದೇ ತರಹದ ವಿರೋಧವಿಲ್ಲ. ಆದರೆ ಈ ಮೊದಲು ಶಾಸಕರ ನೇತೃತ್ವದ ಕ್ರಿಯಾಯೋಜನೆಯಂತೆ ಕರೆಯಲಾದ ಕಾಮಗಾರಿಗಳ ಟೆಂಡರ್ ಜಾರಿಗೆ ತರುವ ಮೂಲಕ ಅವರ ನಿರ್ಣಯಕ್ಕೆ ಗೌರವ ಕೊಡುವಂತೆ ಸದಸ್ಯೆಯರಾದ ಅಶ್ವಿನಿ ಅಂಕಲಕೋಟಿ, ಪೂರ್ಣಿಮಾ ಪಾಟೀಲ, ವಾಣಿ ಹತ್ತಿ ಆಗ್ರಹಿಸಿದರು.

ಇದಕ್ಕೆ ಆಡಳಿತ ಪಕ್ಷದ ಸದಸ್ಯರು ಸಹಮತ ಸೂಚಿಸಲಿಲ್ಲ. ಇದಕ್ಕೆ ಆಡಳಿತ ಪಕ್ಷದ 11 ಸದಸ್ಯರು, ವಿರೋಧ ಪಕ್ಷಗಳ 7 ಸದಸ್ಯರು ಪರ-ವಿರೋಧ ಮನವಿ ಯನ್ನು ಅಧ್ಯಕ್ಷರಿಗೆ ಸಲ್ಲಿಸಿದರು. ಬಹುಮತವಿದ್ದ ಆಡಳಿತ ಪಕ್ಷದ ಮನವಿಯನ್ನು ಪುರಸ್ಕರಿಸಲಾಗಿದೆ ಎಂದು ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ ಘೋಷಿಸಿದರು.

ಸಭೆಯಲ್ಲಿ ಅಧ್ಯಕ್ಷೆ ಯಲ್ಲವ್ವ ದುರ್ಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಸದಸ್ಯರಾದ ಬಸವರಾಜ ಓದುನವರ, ಮಹೇಶ ಹೊಗೆಸೊಪ್ಪಿನ, ಜಯಕ್ಕ ಕಳ್ಳಿ, ಮುಸ್ತಾಕ ಶಿರಹಟ್ಟಿ, ರಾಮಪ್ಪ ಗಡದವರ, ಜಯಮ್ಮ ಅಂದಲಗಿ, ಮಹಾದೇವಪ್ಪ ಅಣ್ಣಿಗೇರಿ, ಮಂಜವ್ವ ನಂದೆಣ್ಣವರ, ಸಿಕಂದರ ಕಣಕೆ, ವಿಜಯ ಕರಡಿ, ಎಸ್.ಕೆ. ಹವಾಲ್ದಾರ, ಕವಿತಾ ಶರಸೂರಿ, ಪೂಜಾ ಖರಾಟೆ, ಮುಖ್ಯಾಧಿಕಾರಿ ಮಹೇಶ, ಕೆಯುಡಬ್ಲುಎಸ್‌ಡಿಬಿ ಇಲಾಖೆ ಇಇ ಜಿ.ಬಿ. ಹೊಸಮನಿ, ಇಂಜಿನಿಯರ್ ಕಾಟೇವಾಲೆ ಇದ್ದರು. ಹನುಮಂತ ನಂದೆಣ್ಣವರ, ಮಂಜುಳಾ ಹೂಗಾರ ನಿರೂಪಿಸಿದರು.

ಆಡಳಿತ ಪಕ್ಷದ ಹಿರಿಯ ಸದಸ್ಯ ರಾಜಣ್ಣ ಕುಂಬಿ ಮಾತನಾಡಿ, ತುಂಗಭದ್ರಾ ನದಿ ಪಾತ್ರದ ಮೇವುಂಡಿ ಜಾಕ್‌ವೆಲ್‌ನಿಂದ ಲಕ್ಷ್ಮೇಶ್ವರಕ್ಕೆ ನೀರು ಸರಬರಾಜು ಮಾಡುವ ಪೈಪ್‌ಲೈನ್ ಹಾಳಾಗಿದ್ದು ಹೊಸ ಪೈಪ್‌ಲೈನ್ ಅಳವಡಿಕೆಗೆ ಎಲ್ಲರೂ ಸೇರಿ ಸಕಾರದಿಂದ ಅನುದಾನ ತರುವ ಪ್ರಯತ್ನ ಮಾಡೋಣ ಎಂದು ಸಲಹೆ ನೀಡಿದರಲ್ಲದೆ, ಸದ್ಯಕ್ಕೆ ನೀರಿನ ಸಮಸ್ಯೆ ಬಗೆಹರಿಸುವದು ಅಗತ್ಯವಾಗಿದ್ದು ಇದ್ದ ಪೈಪ್‌ಲೈನ್ ನವೀಕರಣ/ದುರಸ್ಥಿಗೆ ಆದ್ಯತೆ ನೀಡಿ ಎಂದು ಹೇಳಿದರು.

### ಪಟ್ಟಣ ಪಂಚಾಯಿತಿ ಅಧ್ಯಕ್ಷರಾಗಿ ಮಳ್ಳಿ, ಉಪಾಧ್ಯಕ್ಷರಾಗಿ ಕೋರಧಾನ್ಯಮಠ ಆಯ್ಕೆ

# ಬಿಜೆಪಿ ವಿರೋಧಿ ಬಣಕ್ಕೆ ಪ.ಪಂ ಗದ್ದುಗೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಆರೇಳು ದಿನಗಳಿಂದ ತೀವ್ರ ಕುತೂಹಲ ಕೆರಳಿಸಿದ್ದ ನರೇಗಲ್ಲ ಪ.ಪಂ ಅಧ್ಯಕ್ಷ-ಉಪಾಧ್ಯಕ್ಷ ಚುನಾವಣೆಯು ಸೆ. 2ರಂದು ನಡೆದು ಬಿಜೆಪಿಯ ವಿರೋಧಿ ಬಣದ ಫಕೀರಪ್ಪ ಮಳ್ಳಿ ಅಧ್ಯಕ್ಷರಾಗಿ ಮತ್ತು ಕುಮಾರಸ್ವಾಮಿ ಕೋರಧಾನ್ಯಮಠ ಉಪಾಧ್ಯಕ್ಷರಾಗಿ ಆಯ್ಕೆಯಾದರು.

ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಚುನಾವಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸಿದರು. ಕಳೆದ ಆರು ದಿನಗಳಿಂದ ಕಾಣೆಯಾಗಿದ್ದ ಬಿಜೆಪಿಯ 6 ಸದಸ್ಯರು ಕಾಂಗ್ರೆಸ್‌ನ ಬೆಂಬಲಿಗರೊಂದಿಗೆ ಇಂದು ಚುನಾವಣಾ ಸಮಯಕ್ಕೆ ಪ್ರತ್ಯಕ್ಷರಾದರು. ಬೆಳಿಗ್ಗೆ 10.30ಕ್ಕೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಯಿತು.

ಅಧ್ಯಕ್ಷ ಸ್ಥಾನಕ್ಕೆ ಬಿಜೆಪಿ ವಿರೋಧಿ ಬಣದ ಫಕೀರಪ್ಪ ಮಳ್ಳಿ ಮತ್ತು ಬಿಜೆಪಿಯ ಮಲ್ಲಿಕಾರ್ಜುನಗೌಡ ಭೂಮನಗೌಡ್ರ ನಾಮಪತ್ರ ಸಲ್ಲಿಸಿದರು. ಉಪಾಧ್ಯಕ್ಷ ಸ್ಥಾನಕ್ಕೆ ಬಿಜೆಪಿ ವಿರೋಧಿ ಬಣದ ಕುಮಾರಸ್ವಾಮಿ ಕೋರಧಾನ್ಯಮಠ ಹಾಗೂ ಬಿಜೆಪಿಯ ವಿಶಾಲಾಕ್ಷಿ ಹೊಸಮನಿ ನಾಮಪತ್ರ ಸಲ್ಲಿಸಿದರು.

ನಾಮಪತ್ರಗಳನ್ನು ಪರಿಶೀಲಿಸಿದ ಚುನಾವಣಾಧಿಕಾರಿಗಳು ಮಧ್ಯಾಹ್ನ 2.15ರವರೆಗೆ ನಾಮಪತ್ರ ಹಿಂಪಡೆಯಲು ಅವಕಾಶ ನೀಡಿದ್ದರು. ಆದರೆ ಯಾರೂ ನಾಮಪತ್ರಗಳನ್ನು ಹಿಂಪಡೆಯದೆ



ಇದ್ದುದರಿಂದ 2.15ಕ್ಕೆ ಚುನಾವಣಾ ಪ್ರಕ್ರಿಯೆ ಪ್ರಾರಂಭವಾಯಿತು. ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆಯಲ್ಲಿ ಬಿಜೆಪಿ ವಿರೋಧಿ ಬಣದ 6 ಸದಸ್ಯರು, ವಿರೋಧಿ ಬಣವನ್ನು ಬೆಂಬಲಿಸಿದ 3 ಜನ ಕಾಂಗ್ರೆಸ್ ಸದಸ್ಯರು, ಕಾಂಗ್ರೆಸ್ ಬೆಂಬಲಿತ ಓರ್ವ ಪಕ್ಷೇತರ ಸದಸ್ಯ ಮತ್ತು ಶಾಸಕರ ಮತ ಒಟ್ಟು 11 ಮತಗಳು ವಿರೋಧಿ ಬಣದ ಅಧ್ಯಕ್ಷ ಸ್ಥಾನದ ಆಕಾಂಕ್ಷಿ, 14ನೇ ವಾರ್ಡ್‌ನ ಸದಸ್ಯ ಫಕೀರಪ್ಪ ಮಳ್ಳಿಯವರ ಪರವಾಗಿ ಚಲಾವಣೆಯಾದವು.

ಉಪಾಧ್ಯಕ್ಷ ಸ್ಥಾನದ ಆಕಾಂಕ್ಷಿ 17ನೇ ವಾರ್ಡ್‌ನ ಸದಸ್ಯ ಕುಮಾರಸ್ವಾಮಿ ಕೋರಧಾನ್ಯಮಠ ಅವರಿಗೆ 11 ಮತಗಳು ಚಲಾವಣೆಯಾದವು. ಬಿಜೆಪಿಯ ಅಧ್ಯಕ್ಷ ಸ್ಥಾನದ ಆಕಾಂಕ್ಷಿ 4ನೇ ವಾರ್ಡ್‌ನ ಮಲ್ಲಿಕಾರ್ಜುನಗೌಡ ಭೂಮನಗೌಡ್ರ ಅವರಿಗೆ 7 ಮತಗಳು ಹಾಗೂ ಉಪಾಧ್ಯಕ್ಷ ಸ್ಥಾನದ ಆಕಾಂಕ್ಷಿ ಬಿಜೆಪಿಯ 8ನೇ ವಾರ್ಡ್‌ನ ವಿಶಾಲಾಕ್ಷಿ ಹೊಸಮನಿ ಅವರಿಗೆ 7 ಮತಗಳು ಬಂದವು. ಆಗ ಚುನಾವಣಾಧಿಕಾರಿ, ಅಧ್ಯಕ್ಷರಾಗಿ ಫಕೀರಪ್ಪ ಮಳ್ಳಿ ಹಾಗೂ ಉಪಾಧ್ಯಕ್ಷರಾಗಿ ಕುಮಾರಸ್ವಾಮಿ ಕೋರಧಾನ್ಯಮಠರ ಆಯ್ಕೆಯನ್ನು ಘೋಷಿಸಿದರು.


ಆಯ್ಕೆಯ ತರುವಾಯ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಬಿಜೆಪಿಯ ದುರಾಡಳಿತ ಮತ್ತು ಅಲ್ಲಿನ ಮುಖಂಡರ ವರ್ತನೆಗೆ ಬೇಸತ್ತು 6 ಸದಸ್ಯರು ಬಿಜೆಪಿಯಿಂದ ನಮಗೆ ಬೆಂಬಲ ಕೊಡಿ ಎಂದು ಕೇಳಿದರು. ಅದಕ್ಕಾಗಿ ನಾವು ಪಕ್ಷೇತರ ಸದಸ್ಯರೂ ಸೇರಿದಂತೆ ನಾಲ್ಕು ಜನರು ಮತ್ತು ನಾನು ಬಿಜೆಪಿ ವಿರೋಧಿ ಬಣದ ಸದಸ್ಯರಿಗೆ ಬೆಂಬಲ ನೀಡಿದೆವು. ಈಗ ಅದೇ ವಿರೋಧಿ ಬಣದ ಸದಸ್ಯರು ಅಧ್ಯಕ್ಷ, ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಇನ್ನು ಮುಂದೆ ನರೇಗಲ್ಲ ಪಟ್ಟಣ ಅಭಿವೃದ್ಧಿಯ ಪಥದಲ್ಲಿ ಸಾಗುತ್ತದೆ ಎಂದು ಹೇಳಿದರು.

ಬಿಜೆಪಿಯ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಮಲ್ಲಿಕಾರ್ಜುನಗೌಡ ಭೂಮನಗೌಡ್ರ ಸುದ್ದಿಗಾರರೊಂದಿಗೆ ಮಾತನಾಡಿ, ಈ ಹಿಂದಿನ ಅವಧಿಯಲ್ಲಿ ಪಕ್ಷದಿಂದ ಅಧ್ಯಕ್ಷ/ಉಪಾಧ್ಯಕ್ಷರಾಗುವಲ್ಲಿ ನನ್ನ ಪಾತ್ರ ಮಹತ್ವದ್ದಿದೆ. ಅದನ್ನು ಮರೆತು ಅಧಿಕಾರದ ಆಸೆಯಿಂದ ಇವರು ಪಕ್ಷಕ್ಕೆ ದ್ರೋಹ ಮಾಡಿ ಹೊರಕ್ಕೆ ಹೋಗಿದ್ದಾರೆ. ಅವರೂ ಆಡಳಿತ ಮಾಡಿ ತೋರಿಸಲಿ ಎಂದರು.

**ಸಂಭ್ರಮಾಚರಣೆ**

ಬಿಜೆಪಿಯ ವಿರೋಧಿ ಬಣ ತಮ್ಮ ಬೆಂಬಲ ಪಡೆದು ಅಧ್ಯಕ್ಷ, ಉಪಾಧ್ಯಕ್ಷರಾಗಿ ಆಯ್ಕೆಯಾಗುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ವಿತರಿಸಿ ಸಂಭ್ರಮಾಚರಣೆ ಮಾಡಿದರು. ರೋಣ ಸಿಪಿಐ ಎಸ್.ಎಸ್. ಬೀಳಗಿ, ನರೇಗಲ್ಲ ಪಿಎಸ್‌ಐ ಐಶ್ವರ್ಯ ನಾಗರಾಳ, ಮತ್ತಿತರ ಪೊಲೀಸ್ ಸಿಬ್ಬಂದಿಯವರು ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು.

## ಕಾಮಗಾರಿ ಮುಂದುವರೆಸಲು ಆಗ್ರಹ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪ್ರಮುಖ ರಸ್ತೆಯಾಗಿರುವ ಬಜಾರ ರಸ್ತೆಯಲ್ಲಿನ ಚಾವಡಿ ಹತ್ತಿರದಿಂದ ಕೆಂಚಲಾಪೂರ ರಸ್ತೆಯವರೆಗೂ ಸಿ.ಸಿ ರಸ್ತೆ ಕಾಮಗಾರಿಗೆ ಪುರಸಭೆಯಲ್ಲಿ ಟೆಂಡರ್ ಆಗಿದ್ದು, ಆ ಕಾಮಗಾರಿ ಪ್ರಾರಂಭವಾಗುತ್ತಿಲ್ಲ. ಕೂಡಲೇ ಈ ರಸ್ತೆಯ ಕಾಮಗಾರಿಯನ್ನು ತಕ್ಷಣದಿಂದ ಪ್ರಾರಂಭವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಸೋಮವಾರ ಜಯಕರ್ನಾಟಕ ಸಂಘಟನೆ ಸದಸ್ಯರು ಪುರಸಭೆ ಮುಖ್ಯಾಧಿಕಾರಿ, ಅಧ್ಯಕ್ಷರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆ ಮುಖಂಡರು, ಇದು ಪ್ರಮುಖ ರಸ್ತೆಯಾಗಿದ್ದು, ಅಲ್ಲಿನ ರಸ್ತೆ ಸಂಪೂರ್ಣ ಹದಗೆಟ್ಟಿದೆ. ಶಾಲಾ ಮಕ್ಕಳಿಗೆ ಬಂದು ಹೋಗಲು ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅರ್ಧಕ್ಕೆ ಸ್ಥಗಿತಗೊಂಡಿರುವ ರಸ್ತೆ ಕಾಮಗಾರಿ ಪ್ರಾರಂಭಿಸಿ ಮಕ್ಕಳಿಗೆ, ಸಾರ್ವಜನಿಕರಿಗೆ ಅನೂಕೂಲ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಆಡಳಿತ ಮಂಡಳಿಯ ಸಭೆಯಲ್ಲಿ ಈ ವಿಷಯಕ್ಕೆ ಸಂಬಂಧಿಸಿದಂತೆ ಸದಸ್ಯರು ಚರ್ಚಿಸಿ ನಿರ್ಣಯ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು. ಅಧ್ಯಕ್ಷೆ ಯಲ್ಲವ್ವ ದುರ್ಗಣ್ಣವರ, ಉಪಾಧ್ಯಕ್ಷ ಪೀರದೋಷ ಆಡೂರ, ಜಯ ಕರ್ನಾಟಕ ಸಂಘಟನೆಯ ಗೌರವಾಧ್ಯಕ್ಷ ಇಸಾಕ್‌ಭಾಷಾ ಹರಪನಹಳ್ಳಿ, ತಾಲೂಕಾಧ್ಯಕ್ಷ ರಮೇಶ ಹಂಗನಕಟ್ಟಿ, ನಗರ ಅಧ್ಯಕ್ಷ ನಜೀರ ಬಾಗಲಕೋಟಿ, ವೀರಭದ್ರಯ್ಯ ಮಠಪತಿ, ಬಸವರಾಜ ಮೇಲ್ಮುರಿ, ಸಚಿನ್‌ಕುಮಾರ ಮೇಲ್ಮುರಿ, ಮೈನುದ್ದಿನ್ ಮೋಮಿನ, ಗೌಸ್ ಸೂರಣಗಿ, ಹುಬ್ಬಳ್ಳಿ, ನೂರಅಹ್ಮದ್ ಮುಂತಾದವರಿದ್ದರು.

### ಜಿಲ್ಲಾ ಕಾರ್ಯಾಲಯ ಉದ್ಘಾಟನೆ, ಉತ್ಸವ ಸಮಿತಿಯ ಪದಾಧಿಕಾರಿಗಳ ಆಯ್ಕೆ

## ಹಿಂದೂ ಮಹಾಗಣಪತಿ ಉತ್ಸವಕ್ಕೆ ಸಿದ್ಧತೆ




■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಸುದರ್ಶನ ಚಕ್ರ ಯುವ ಮಂಡಳದಿಂದ ಗದಗ ಕಾಟನ್ ಮಾರ್ಕೆಟ್ ರಸ್ತೆಯಲ್ಲಿ ಹಿಂದೂ ಮಹಾಗಣಪತಿ ಉತ್ಸವವವನ್ನು ಶ್ರದ್ಧಾ-ಭಕ್ತಿಯೊಂದಿಗೆ ಆಚರಿಸಲಾಗುವದು ಎಂದು ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ರಾಘವೇಂದ್ರ ಹಬೀಬ ಹೇಳಿದರು.

ಹಿಂದೂ ಮಹಾಗಣಪತಿ ಜಿಲ್ಲಾ ಕಾರ್ಯಾಲಯದ ಉದ್ಘಾಟನೆ ಹಾಗೂ ನೂತನ ಪದಾಧಿಕಾರಿಗಳ ಆಯ್ಕೆ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಗದುಗಿನ ಕಾಟನ್ ಮಾರ್ಕೆಟ್‌ನಲ್ಲಿ ಹಿಂದೂ ಮಹಾಗಣಪತಿ ಉತ್ಸವವನ್ನು ಬಹು ವೈಭವದೊಂದಿಗೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಆಚರಿಸಿಕೊಂಡು ಬರಲಾಗಿದ್ದು, ಈ ವರ್ಷವೂ ಸಹ ಅದ್ದೂರಿಯಾಗಿ ಆಚರಿಸಲಾಗುವದು ಎಂದರು.

ಈ ವರ್ಷದ ಉತ್ಸವ ಸಮಿತಿಯ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದ್ದು, ಗೌರವ ಅಧ್ಯಕ್ಷರಾಗಿ ಎಸ್.ಎಚ್. ಶಿವನಗೌಡರ, ಅಧ್ಯಕ್ಷರಾಗಿ ಸುಧೀರ ಕಾಟೀಗರ, ಉಪಾಧ್ಯಕ್ಷರಾಗಿ ರವಿರಾಜ ಮಾಳೇಕೊಪ್ಪಮಠ, ಗಂಗಾಧರ ಹಬೀಬ, ಅಶ್ವಿನಿ ಜಗತಾಪ, ಪ್ರಧಾನ ಕಾರ್ಯದರ್ಶಿಯಾಗಿ ರಾಘವೇಂದ್ರ ಹಬೀಬ, ಕಾರ್ಯದರ್ಶಿಯಾಗಿ ಅಂಕಿತ ಸವಕಾರ, ಶಿವು ಹಿರೇಮನಿಪಾಟೀಲ, ಕುಮಾರ ಮಾರನಬಸರಿ, ಖಜಾಂಚಿಯಾಗಿ ಕೀರ್ತಿ ಕಾಂಬಳೇಕರ, ಪ್ರಶಾಂತ ಪಾಟೀಲ ಆಯ್ಕೆಯಾಗಿದ್ದಾರೆ ಎಂದು ತಿಳಿಸಿದರು.

ಉತ್ಸವ ಸಮಿತಿಯ ಗೌರವ ಅಧ್ಯಕ್ಷರಾಗಿ ಆಯ್ಕೆಯಾದ ಎಸ್.ಎಚ್. ಶಿವನಗೌಡರ ಮಾತನಾಡಿ, ಈ ಸಲ ಹಿಂದೂ ಮಹಾಗಣಪತಿ ಉತ್ಸವವನ್ನು ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನಿತ್ಯ ವೈವಿಧ್ಯಮಯ ಕಾರ್ಯಕ್ರಮಗಳನ್ನು ರೂಪಿಸಲಾಗುವದು ಎಂದರು.

ವೇದಿಕೆಯ ಮೇಲೆ ಮೋಹನ ಮಾಳಶೆಟ್ಟರ ಹಾಗೂ ಅಶ್ವಿನಿ ಜಗತಾಪ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಮಂಜು ಖೋಡೆ, ಯಲ್ಲಪ್ಪ ಭಜಂತ್ರಿ, ರಮೇಶ ಸಜ್ಜಗಾರ, ರವಿ ಚವ್ಹಾಣ, ಗಜು ಹಬೀಬ, ಗಣೇಶ ಲದವಾ, ಸ್ವರೂಪ ಹುಬ್ಬಳ್ಳಿ, ಸುರೇಶ ಚವ್ಹಾಣ, ಪ್ರಶಾಂತ ಚವಡಿ, ನಾಗರಾಜ ಸೋಳಂಕಿ, ವಿಶ್ವನಾಥ ಶಿರಗಣ್ಣವರ, ರವಿ ನರೇಗಲ್ಲ, ಪ್ರಸಾದ ಸಿದ್ಲಿಂಗ್, ಅನೀಲ ಪವಾರ, ಗಿರೀಶ ಬೇವಿನಕಟ್ಟಿ, ಗಣೇಶ ಚವ್ಹಾಣ, ಮಾರುತಿ ಕಾಟವಾ, ಪ್ರವೀಣ ನಾಯ್ಕರ್, ಈರಣ್ಣ ಬಳ್ಳಾರಿ ಮುಂತಾದವರು ಉಪಸ್ಥಿತರಿದ್ದರು.

## ಉಪನಾಳ ಪಾರ್ಕ್ ಬಡಾವಣೆ ಅಭಿವೃದ್ಧಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸವಣೂರು ರಸ್ತೆಯ ಶ್ರೀ ಸುಬ್ರಮಣ್ಯ ದೇವಸ್ಥಾನದ ಹತ್ತಿರವಿರುವ ಉಪನಾಳ ಪಾರ್ಕ್ ಬಡಾವಣೆಯು ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿದ್ದು, ಹಲವಾರು ವರ್ಷಗಳಿಂದ ರಸ್ತೆ, ಚರಂಡಿಗಳಿಲ್ಲದೆ ಇಲ್ಲಿನ ನಿವಾಸಿಗಳು ಪರದಾಡುವಚಿತಾಗಿದೆ. ಪುರಸಭೆಯ ಅನುದಾನದಲ್ಲಿ ಈ ಬಡಾವಣೆಯ ರಸ್ತೆಗಳನ್ನು ಅಭಿವೃದ್ಧಿಪಡಿಸುವಂತೆ ಆಗ್ರಹಿಸಿ ಸ್ಥಳೀಯ ನಿವಾಸಿಗಳು ಸೋಮವಾರ ಪುರಸಭೆ ಅಧ್ಯಕ್ಷರಿಗೆ ಮನವಿ ಅರ್ಪಿಸಿದರು.




ಈ ಬಡಾವಣೆಯಲ್ಲಿ ಹಲವಾರು ವರ್ಷಗಳಿಂದ ರಸ್ತೆ, ಬೀದಿ ದೀಪ, ಚರಂಡಿ ಸೇರಿದಂತೆ ಯಾವುದೇ ಸೌಲಭ್ಯಗಳು ದೊರೆಯದೆ ನಿವಾಸಿಗಳು ಪರದಾಡುತ್ತಿದ್ದಾರೆ. ಪುರಸಭೆಯಿಂದ ಯಾವುದೇ ಅಭಿವೃದ್ಧಿ ಕಾರ್ಯಗಳು ಇಲ್ಲಿ ನಡೆದಿಲ್ಲ. ಅದಕ್ಕಾಗಿ ಕೂಡಲೇ ಇಲ್ಲಿನ ಬಡಾವಣೆ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು. ಉಪನಾಳ ಪಾರ್ಕ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ. ಈ ಕಾಮಗಾರಿಯನ್ನು ಬೇರೆ ಕಡೆ ಸ್ಥಳಾಂತರಿಸದೆ ಉಪನಾಳ ಪಾರ್ಕ್ ಅಭಿವೃದ್ಧಿಗೆ ವಿನಿಯೋಗಿಸಬೇಕೆಂದು ಮನವಿ ಮಾಡುವದಾಗಿ ಹೇಳಿದರು.

ಮನವಿ ಸ್ವೀಕರಿಸಿದ ಅಧ್ಯಕ್ಷ-ಉಪಾಧ್ಯಕ್ಷರು ಸಭೆಯಲ್ಲಿ ಚರ್ಚಿಸಿ ಸೂಕ್ತ ನಿರ್ಣಯ ಕೈಗೊಳ್ಳುವದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಎಸ್.ಡಿ. ತಿರಕಪ್ಪನವರ, ಆರ್. ಎಫ್. ರಿತ್ತಿ, ಜೆ.ವಿ. ಅರಳಿಕಟ್ಟಿ, ಎ.ಎಸ್. ರಾಯಣ್ಣವರ, ಜಿ.ಜಿ. ಹುರಕನವರ, ಎಸ್.ಆರ್. ರಿತ್ತಿ, ಆರ್.ಇ. ಬಾಕಳೆ, ಆರ್.ಡಿ. ನಾಯಕ್, ಎಂ.ಡಿ. ಹುಬ್ಬಳ್ಳಿ, ಎಂ.ಬಿ. ಸಂಗನಪೇಟ, ಕೆ.ಬಿ. ಘಂಟಿ, ಬಸಪ್ಪ ಕುರಿ, ಎನ್.ಡಿ. ಸೂರಣಗಿ, ಮಲ್ಲಿಕಾರ್ಜುನ, ಅಶೋಕ ಕಲ್ಲಣ್ಣವರ, ಎಂ.ಎಸ್. ಮಳಿಮಠ, ಪಿ.ಪಿ. ಚಲುವಾದಿ, ಬಿ.ಎಫ್. ಶಿರೂರ ಮುಂತಾದವರಿದ್ದರು.


### ಶ್ರಮಜೀವಿಗಳ ಸನ್ಮಾನ ಕಾರ್ಯಕ್ರಮದಲ್ಲಿ ಸಿಪಿಐ ನಾಗರಾಜ ಮಾಡಳ್ಳಿ

## ಸಾಮಾನ್ಯರನ್ನು ಗೌರವಿಸುವ ಕಾರ್ಯ ಸ್ತುತ್ಯಾರ್ಹ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ಪ್ರಾಮಾಣಿಕವಾಗಿ ಜೀವನ ಸಾಗಿಸುತ್ತಿರುವ ಅನೇಕರನ್ನು ಗುರುತಿಸಿ, ಅವರನ್ನು ಗೌರವಿಸುವ ಕಾರ್ಯ ಮಾಡಿರುವದು ಸ್ತುತ್ಯಾರ್ಹ ಸಂಗತಿಯಾಗಿದೆ ಎಂದು ಸಿಪಿಐ ನಾಗರಾಜ ಮಾಡಳ್ಳಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಯಜಮಾನ್ ಜಿ.ಎಫ್. ಉಪನಾಳ ಪ್ರತಿಷ್ಠಾನದ ಶಾಂತಿಧಾಮ ವೃದ್ಧಾಶ್ರಮದಲ್ಲಿ ಶಿವಲಿಂಗಯ್ಯ ಹೊತಗಿಮಠ ಅವರ ಸ್ನೇಹಿತರ ಬಳಗದ ವತಿಯಿಂದ ಶ್ರಮಜೀವಿಗಳನ್ನು ಗುರುತಿಸಿ ಸನ್ಮಾನಿಸುವ ವಿಶಿಷ್ಟ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಇಂದು ಅನೇಕರು ಯಾವುದೇ ಫಲಾಪೇಕ್ಷೆಗಳಿಲ್ಲದೆ ಸಮಾಜದಲ್ಲಿ ನಿಸ್ವಾರ್ಥದಿಂದ ತಮ್ಮ ಕೆಲಸವನ್ನು ನಿಭಾಯಿಸಿಕೊಂಡು ಹೋಗುತ್ತಿರುತ್ತಾರೆ. ಅವರನ್ನು ಯಾವುದೇ ರೀತಿಯಲ್ಲಿ ಗುರುತಿಸುವ



ಕಾರ್ಯ ನಡೆದಿರುವದಿಲ್ಲ. ಆದರೆ ಅವರು ಅದರ ಬಗ್ಗೆ ಚಿಂತನೆ ಮಾಡದೆ ತಮ್ಮ ಕಾಯಕದಲ್ಲಿ ನಿರತರಾಗಿರುತ್ತಾರೆ. ಅಂತಹ ಮುಗ್ಧ ಜೀವಿಗಳನ್ನು ಇಂದು ಗೌರವಿಸುವ ಕಾರ್ಯ ಮಾಡಿರುವದು ಅರ್ಥಪೂರ್ಣ ಎಂದರು. ನಿವೃತ್ತ ಶಿಕ್ಷಕರಾದ ಪೂರ್ಣಾಜಿ ಖರಾಟೆ ಮತ್ತು ಸಿ.ಜಿ. ಹಿರೇಮ್ಠ, ಶಿವಲಿಂಗಯ್ಯ ಹೊತಗಿಮಠ ತಮ್ಮ ಬಳಗವನ್ನೆಲ್ಲ ಸೇರಿಸಿ ಹಿರಿಯ ಜೀವಿಗಳ ನಡುವೆ ಶ್ರಮಜೀವಿಗಳನ್ನು ಗುರುತಿಸುವ ಮೂಲಕ ಸಮಾಜಕ್ಕೆ ಒಂದು ಸಂದೇಶವನ್ನು ನೀಡಿದ್ದಾರೆ. ಯಾರೂ ಗುರುತಿಸದ ಹಿರಿಯರನ್ನು ಗುರುತಿಸಿ ಗೌರವಿಸಿರುವದು ಮೆಚ್ಚುಗೆಯ ಸಂಗತಿಯಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಂತಿಧಾಮ ವೃದ್ಧಾಶ್ರಮದ ಅಧ್ಯಕ್ಷ ಪ್ರಕಾಶ ಉಪನಾಳ ವಹಿಸಿದ್ದರು. ಪಿಎಸ್‌ಐ ಈರಪ್ಪ ರಿತ್ತಿ, ಪ್ರೇಮಾವತಿ ಹೊತಗಿಮಠ, ಸುನೀಲ ಮಹಾಂತಶೆಟ್ಟರ, ಪ್ರವೀಣ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ, ಮಲ್ಲಿಕಾರ್ಜುನ ಕಳಸಾಪೂರ, ಪದ್ಮರಾಜ ಪಾಟೀಲ, ಮಹೇಶ ಲಿಂಬಯ್ಯಸ್ವಾಮಿಮಠ, ಪತ್ರಕರ್ತರಾದ ದಿಗಂಬರ ಪೂಜಾರ, ರಮೇಶ ನಾಡಗೇರ, ನಾಗರಾಜ ಹಣಗಿ, ಅಶೋಕ ಸೊರಟೂರ, ಮಹಾಲಿಂಗರಾಯ ಪೂಜಾರ, ಸುರೇಶ ಲಮಾಣಿ, ರತ್ನಾ ಕರ್ಕಿ, ನಂದಾ ದರ್ಮಾಯತ, ಕಾವ್ಯಾ ದೇಸಾಯಿ, ಸ್ವಾತಿ ಪೈ, ನಿರ್ಮಲಾ ಅರಳಿ ಸೇರಿದಂತೆ ಅನೇಕರಿದ್ದರು.

ಸುನೀತಾ ದುದ್ದಗಿ ಸ್ವಾಗತಿಸಿದರು. ಶ್ರಮಜೀವಿಗಳಾದ ಸಿದ್ದಪ್ಪ ಹಂಜಗಿ, ಹುಸೇನಸಾಬ ಬಸನಕೊಪ್ಪ, ಶೇಪ್ಪ ವಾಲಿಶೆಟ್ಟರ, ಯಲ್ಲವ್ವ ನಡುವಲಕೇರಿ, ವಿಜಯಲಕ್ಷ್ಮೀ ಹಡಪದ, ವೀರಪ್ಪ ಮಡಿವಾಳರ ಅವರನ್ನು ಗೌರವಿಸಲಾಯಿತು.

## ಕಸಾಯಿಖಾನೆ, ಮಾಂಸ ಮಾರಾಟ ನಿಷೇಧ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಕಸಾಯಿಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರಿಗೆ ತಿಳಿಯಪಡಿಸುವುದೇನೆಂದರೆ ಶ್ರೀ ಗಣೇಶ ಚತುರ್ಥಿ ಅಂಗವಾಗಿ ಸೆಪ್ಟೆಂಬರ್ 7 ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ.

ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದ್ದು. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

## ಗಣೇಶ ಚತುರ್ಥಿ ಹಿನ್ನೆಲೆ: ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಲ್ಲಿ ವಿನಂತಿಸಿಕೊಳ್ಳುವುದೇನೆದರೆ, ನಗರದಲ್ಲಿ ಗಣೇಶನ ವಿಸರ್ಜನೆ ಮಾಡುವ ಸಮಯದಲ್ಲಿ ಆಗುತ್ತಿರುವ ಪರಿಸರ ಮಾಲಿನ್ಯ ಕುರಿತು ಬೆಂಗಳೂರಿನ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ಅನೇಕ ಸೂಕ್ತ ಸಲಹೆ ಹಾಗೂ ಮಾರ್ಗಸೂಚನೆಗಳನ್ನು ನೀಡಿದ ಪ್ರಯುಕ್ತ ಗದಗ ಬೆಟಗೇರಿ ಅವಳಿ ನಗರದ ಮದ್ಯಭಾಗದಲ್ಲಿರುವ ಬೆಟಗೇರಿ ಭಾಗದ ಅಶೋಕ ರಸ್ತೆ ಡಾ. ನೇರ್ಲೆಕರ ದವಾಖಾನೆ ಎದುರಿಗೆ ನಗರಸಭೆಯಿಂದ ಕಟ್ಟಿದ ಟ್ಯಾಂಕಿನಲ್ಲಿ, ಹುಬ್ಬಳ್ಳಿ ರಸ್ತೆ ಮಾನ್ವಿ ಹಳ್ಳದ ಹತ್ತಿರ ಶ್ರೀ ಮಾನ್ವಿಯವರ ತೆರೆದ ಬಾವಿ (ರಿಂಗ್ ರೋಡಗೆ ಹೊಂದಿಕೊಂಡಿರುವ) ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳವರು ಗಣೇಶ ಮೂರ್ತಿಗಳನ್ನು ವಿಸರ್ಜಿಸಲು ತಿಳಿಸಲಾಗಿದೆ. ನಗರದ ಮನೆಗಳಲ್ಲಿ ಪ್ರತಿಷ್ಠಾಪಿಸಿರುವ ಗಣೇಶನ ವಿಗ್ರಹಗಳನ್ನು ವಿಸರ್ಜಿಸಲು ಹುಡ್ಕೋ ಕಾಲೋನಿ ಶ್ರೀ ಹುಣಸಿಮರದ ಶಾಲೆ ಹತ್ತಿರ, ಹುಡ್ಕೋ ಕಾಲೋನಿ ಗಾರ್ಡನ್ ಹತ್ತಿರ, ಆದರ್ಶ ನಗರ ಗದಗ , ಖಾನತೋಟ ಭಾವಿ ಹತ್ತಿರ ಗದಗ , ಹಾಲಕೆರೆ ಮಠದ ಹತ್ತಿರ ಗದಗ , ಡಿಸಿ ಮಿಲ್ಲ ಕಾಂಪೌಂಡ್ ಹತ್ತಿರ ಗದಗ, ಬಸವೇಶ್ವರ ನಗರ ಕರ್ನಾಟಕ ಚಿತ್ರಮಂದಿರ ಹಿಂದೆ ಗದಗ, ವಿಠೋಬ ದೇವರ ಗುಡಿ ಹತ್ತಿರ ಜರ್ಮನ್ ದವಾಖಾನೆ ಹತ್ತಿರ ಬೆಟಗೇರಿ, ಮಸಾರಿ ಭಾಗದ ವಿವೇಕಾನಂದ ನಗರದಲ್ಲಿ ನೀರಿನ ತೊಟ್ಟಿಗಳನ್ನು ಕಟ್ಟಿದ್ದು, ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಯವರು ಗಣೇಶ ಮೂರ್ತಿಗಳನ್ನು ಮೇಲ್ಕಾಣಿಸಿದ ನಿಗದಿಪಡಿಸಿದ ಸ್ಥಳಗಳಲ್ಲಿ ವಿಸರ್ಜಿಸಬೇಕು. ಈ ಟ್ಯಾಂಕ್, ಬಾವಿಗಳಲ್ಲಿ ಪ್ಲಾಸ್ಟಿಕ್ ಹೂವು, ದಾರ ಇನ್ನಿತರ ಯಾವುದೇ ವಸ್ತುಗಳನ್ನು ನೀರಿನಲ್ಲಿ ಹಾಕದೆ ಗದಗ-ಬೆಟಗೇರಿ ನಗರಸಭೆಯಿಂದ ಇಡಲಾದ ಕಂಟೇನರಗಳಲ್ಲಿಯೇ ಪ್ಲಾಸ್ಟಿಕ್ ಹೂವು, ದಾರ ಹಾಕಿ ಪರಿಸರ ಮಾಲಿನ್ಯವಾಗದಂತೆ ತಡೆಯಲು ನಗರಸಭೆಯೊಂದಿಗೆ ಸಹಕರಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿವಾನುಭವಗೋಷ್ಠಿಯಲ್ಲಿ ಡಾ. ಶಂಭು ಬಳಿಗಾರ

## ಸಂಸ್ಕಾರದಿಂದ ಮಾನವ ದೇವಮಾನವನಾಗುತ್ತಾನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಗತ್ತಿನ ಎಲ್ಲ ಜನ್ಮಗಳಲ್ಲಿ ಮನುಷ್ಯ ಜನ್ಮ ಬಲು ದೊಡ್ಡದು. ಈ ಜನ್ಮವು ಅನೇಕ ವರ್ಷಗಳ ತಪಸ್ಸಿನ ಫಲದಿಂದ ನಮಗೆ ದೊರಕಿರುತ್ತದೆ. ಈ ಮಾನವ ಜನ್ಮಕ್ಕೆ ಶುದ್ಧವಾದ ಸಂಸ್ಕಾರ ದೊರೆತರೆ ಅವನು ದೇವಮಾನವನಾಗುತ್ತಾನೆ. ಇಂತಹ ಶಿವಾನುಭವಗೋಷ್ಠಿಗಳು ಮನುಷ್ಯನಿಗೆ ಸಂಸ್ಕಾರ ನೀಡುವ ಶ್ರದ್ಧಾ ಕೇಂದ್ರಗಳಾಗಿವೆ ಎಂದು ಜಾನಪದ ವಿದ್ವಾಂಸ, ನಿವೃತ್ತ ಪ್ರಾಚಾರ್ಯ ಡಾ. ಶಂಭು ಬಳಿಗಾರ ಹೇಳಿದರು.

ಪಟ್ಟಣದ ಕೋಡಿಕೊಪ್ಪದಲ್ಲಿನ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ನರೇಗಲ್ಲ ಹಾಗೂ ಅಕ್ಷರ ಭಾರತ ಪ್ರತಿಷ್ಠಾನ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 53ನೇ ಶಿವಾನುಭವಗೋಷ್ಠಿಯಲ್ಲಿ 'ಜನಪದ ನೆಲೆ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಬದುಕನ್ನು ಹಾಳು ಮಾಡುವ ಆಕರ್ಷಣೆಗಳು ನಮ್ಮ ಕಣ್ಣ ಮುಂದೆ ಸಾಕಷ್ಟಿವೆ. ಅವುಗಳನ್ನು ಅತ್ತ ಸರಿಸಿ ವಿದ್ಯಾರ್ಥಿಗಳಾದ ನೀವು ಮತ್ತು ಸಮಾಜದಲ್ಲಿನ ಯುವಕರು ಬೆಳೆದು ಬರಬೇಕಾದುದು ಇಂದಿನ ಅವಶ್ಯಕತೆಗಳಲ್ಲಿ ಒಂದಾಗಿದೆ. ಮನುಷ್ಯ ಯಾವ ಸಂಸ್ಕಾರದಿಂದ ಬೆಳೆದಿರುತ್ತಾನೆಯೋ ಅದೇ ನಡೆ-ನುಡಿ ಅವನದಾಗಿರುತ್ತದೆ. ಆದ್ದರಿಂದ ನಿಮ್ಮ ನಡೆ-ನುಡಿ ಒಂದಾಗಿರಬೇಕೇ ಹೊರತು ಬೇರೆಯದ್ದಾಗಿರಬಾರದು. ವಿದ್ಯೆ, ವಿನಯ, ಪೌರುಷ ಮತ್ತು ವಿವೇಕಗಳನ್ನು ನಿಮ್ಮ ಜೀವನದಲ್ಲಿ ನೀವುಗಳು ಅಳವಡಿಸಿಕೊಂಡಾಗ ಉತ್ತಮ ನಾಗರಿಕರಾಗುತ್ತೀರಿ. ಶ್ರೀ ಗುರು ಅನ್ನದಾನೇಶ್ವರರ ಕೃಪಾ ಛತ್ರದಲ್ಲಿರುವ ನೀವು ಎಂದಿಗೂ ಪುಣ್ಯವಂತರೆಂದು ಹೇಳಿದ ಡಾ. ಶಂಭು ಬಳಿಗಾರ, ನಮ್ಮ ಹಿಂದಿನ ಜನಪದರು ಹೇಗೆ ಬದುಕಿದರು ಮತ್ತು ಎಂತಹ ಕಾವ್ಯಗಳನ್ನು ಕಟ್ಟಿದರು ಎಂಬುದನ್ನು ಸೋದಾಹರಣವಾಗಿ ವಿವರಿಸಿದರು.

ಶಿವಾನುಭವಗೋಷ್ಠಿಯ ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿಗಳು ಆಶೀರ್ವಚನ ನೀಡಿ, ಶಿವಾನುಭವವೂ ಒಂದು ಜನಪದವೇ. ಜನಪದ ಸಾಹಿತ್ಯ ಎಂದಿಗೂ ಪ್ರಸ್ತುತವಾಗಿದೆ. ಜನಪದಕ್ಕೆ ಜನ ನೆಲೆಯಾದರೆ ಸೆಲೆ ತಾಯಂದಿರಾಗಿದ್ದಾರೆ. ಇಂದಿನ ಜನರು ಮಾನವೀಯ ಸಂಬಂಧಗಳಿಗೆ ಹೆಚ್ಚಿನ ಬೆಲೆ ಕೊಡುವುದನ್ನು ಕಲಿಯಬೇಕು. ನಮ್ಮ ಜಾನಪದ ನಮಗೆ ಅದನ್ನೇ ಹೇಳಿಕೊಡುತ್ತದೆ ಎಂದರು.

ವೇದಿಕೆಯ ಮೇಲೆ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್. ಆರ್. ಗೌಡರ, ನಿವೃತ್ತ ಉಪನ್ಯಾಸಕ ಜಿ.ಜಿ. ಕೋಟಿ ಉಪಸ್ಥಿತರಿದ್ದರು. ಶಿಕ್ಷಕ ಒಂಟೇಲಿ ನಿರೂಪಿಸಿದರು. ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಸ್ವಾಗತಿಸಿ, ಅತಿಥಿಗಳನ್ನು ಪರಿಚಯಿಸಿದರು. ಡಾ. ಕಲ್ಲಯ್ಯ ಹಿರೇಮಠ ವಂದಿಸಿದರು.

ಲಿಂಗಾಯತ ಧರ್ಮದಲ್ಲಿ ಅನ್ನ, ದಾನ ಮತ್ತು ದಾಸೋಹಕ್ಕೆ ವಿಶೇಷ ಮಹತ್ವವಿದೆ. ಸಂಸ್ಕೃತಿ, ವಿಕೃತಿಗಳೆರಡೂ ನಮ್ಮ ಕಣ್ಣ ಮುಂದೆಯೇ ಇವೆ. ಮನುಷ್ಯ ಸಂಸ್ಕೃತಿಯನ್ನು ಆರಿಸಿಕೊಂಡರೆ ಅವನ ಬಾಳು ಬಂಗಾರವಾಗುತ್ತದೆ. ಆದರೆ ಇಂದಿನ ಜನರು ಹೆಚ್ಚಾಗಿ ವಿಕೃತಿಯ ಕಡೆಗೆ ಗಮನ ನೀಡುತ್ತಿರುವುದು ತುಂಬಾ ವಿಷಾದನೀಯ ಎಂದು ಬಳಿಗಾರ ಹೇಳಿದರು.

**'ಮಾತೃನಮನ' ಕಾರ್ಯಕ್ರಮದಲ್ಲಿ ನಗರಸಭೆ ಆಯುಕ್ತ ಮಹೇಶ ಪೋತದಾರ ಅಭಿಮತ**

# ಶಿಕ್ಷಕ ಮಕ್ಕಳ ಬಾಳಿನ ಬೆಳಕು



■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕ ಹುದ್ದೆ ಅತ್ಯಂತ ಪವಿತ್ರವಾದದ್ದು. ಇದೊಂದು ವೃತ್ತಿಯಾಗಿರದೇ ಸೇವಾ ಭಾಗವಾಗಿದೆ. ಎಲ್ಲ ಕ್ಷೇತ್ರದ ಪ್ರಮುಖರಿಗೆ, ಸಾಧಕರಿಗೆ, ಆಧ್ಯಾತ್ಮ ಗುರುಗಳಿಗೆ, ಸಂಶೋಧಕರಿಗೆ ಅಕ್ಷರ ಕಲಿಸಿದಾತ ಶಿಕ್ಷಕ. ಆದರೆ ಶಿಕ್ಷಕ ಕೊನೆಯವರೆಗೂ ಶಿಕ್ಷಕನಾಗಿಯೇ ಉಳಿಯುವುದು ವಿಪರ್ಯಾಸ. ಇವರ ಸೇವೆ ಎಂದೂ ಯಾರೂ ಮರೆಯಲಾರರು. ನಾನು ಶಿಕ್ಷಕನಾಗಿಯೇ ಸೇವೆ ಆರಂಭಿಸಿದವ ಇಂದು ಶಿಕ್ಷಕ ಬಳಗದಿಂದ ಗೌರವ ಸನ್ಮಾನ ಸಿಕ್ಕಿದ್ದು ಅವಿಸ್ಮರಣೀಯ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಹಾಗೂ ನಗರಸಭೆ ಆಯುಕ್ತರಾದ ಮಹೇಶ ಪೋತದಾರ ನುಡಿದರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಏರ್ಪಡಿಸಿದ 'ಮಾತೃನಮನ' ಕಾರ್ಯಕ್ರಮದಲ್ಲಿ ಭಾಗವಹಿಸಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಶಿಕ್ಷಕ ಸಮಾಜದ ಆಸ್ತಿ. ಲಕ್ಷಾಂತರ ಮಕ್ಕಳ ಬಾಳಿಗೆ ಬೆಳಕಾಗುವ ಶಕ್ತಿ ಇರುವುದು ಶಿಕ್ಷಕನಿಗೆ ಮಾತ್ರ. ಅಂತಹ ಶಿಕ್ಷಕನ ಸೇವೆಯನ್ನು ವಿದ್ಯಾರ್ಥಿಗಳು, ಸಮಾಜ ಪಡೆಯಬೇಕು. ಇಂದು ಶಿಕ್ಷಕ ಬಳಗ ನೀಡಿದ ಗೌರವವನ್ನು ನನ್ನ ಜೀವಮಾನದಲ್ಲಿ ಸದಾಕಾಲ ಗೌರವ ಆದರಗಳೊಂದಿಗೆ ಸ್ಮರಿಸುತ್ತಾ ಇರುತ್ತೇನೆ ಎಂದರು.

ಡಾ. ಬಸವರಾಜ ಧಾರವಾಡ, ಎಚ್.ಆರ್. ಪೆಟ್ಲೂರ್, ಉಪನ್ಯಾಸಕ ಶಂಕರ ಹಡಗಲಿ ಸೇರಿದಂತೆ ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಮುಖ್ಯೋಪಾಧ್ಯಾಯೆ ಜಯಲಕ್ಷ್ಮೀ ಅಣ್ಣಿಗೇರಿ ಮುಂತಾದವರು ಮಾತನಾಡಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಸುಭಾಸ ನಿಡಸನೂರ, ಎ.ಎಮ್. ಸಂಗನಾಳ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶೋಭಾ ಎಸ್. ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಸಂಜೀವಿನಿ ಕೂಲಗುಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ಉಪಸ್ಥಿತರಿದ್ದರು. ಶಶಿಕಲಾ ಬಿ.ಗುಳೇದ ಸ್ವಾಗತಿಸಿದರು. ಗಂಗಾ ಎಂ.ಅಳವಂಡಿ ನಿರೂಪಿಸಿದರು. ಕಾರ್ಯಕ್ರಮ ಆಯೋಜಕಿ ಶಾರದಾ ಬಾಣದಪ್ರಾಸ್ತಾವಿಕವಾಗಿ ಮಾತನಾಡಿ ವಂದಿಸಿದರು.

**ಶಿವ ಶರಣರ ಭಾವಚಿತ್ರ ಮೆರವಣಿಗೆಯ ಸಂಭ್ರಮ, ಮನ ಸೆಳೆದ ತತ್ವಪದಗಳು**

# ಹಾಲಗೊಂಡ ಬಸವೇಶ್ವರ ಜಾತ್ರೆಯ ಮೆರುಗು

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಹೂವಿನ ಅಲಂಕಾರದ ಮಂಟಪದಲ್ಲಿ ನಾಡಿನ ಶಿವಶರಣರ ಭಾವಚಿತ್ರ, ಮೂರ್ತಿಗಳ ಮೆರವಣಿಗೆ, ಶರಣರ ವಚನಗಳ, ತತ್ವ ಪದಗಳ ಭಜನಾ ಕಲಾವಿದರ ಹಾಡುಗಾರಿಕೆ, ಒಂದೇ ಬಣ್ಣದ ಬಟ್ಟೆಯನ್ನು ಧರಿಸಿ ಪಾಲ್ಗೊಂಡ ಭಜನಾ ಕಾರ್ಯಕರ್ತರು ಐತಿಹಾಸಿಕ ಲಕ್ಕುಂಡಿ ಗ್ರಾಮದ ಹಾಲಗೊಂಡ ಬಸವೇಶ್ವರ ರಥೋತ್ಸವದ ಶ್ರಾವಣದ ಕೊನೆಯ ಸೋಮವಾರದ ಸಂಭ್ರಮ ಹೆಚ್ಚಿಸಿದರು.

ಸುಮಾರು 121 ವಸಂತಗಳನ್ನು ಪೊರೈಸಿರುವ ಹಾಲಗೊಂಡ ಬಸವೇಶ್ವರ ಜಾತ್ರೆಯಲ್ಲಿ ಗ್ರಾಮದ 14 ಭಜನಾ ಸಂಘಗಳು ನಾಡಿನ ಶಿವ ಶರಣರ ತತ್ವಪದಗಳ ಹಾಡಿನೊಂದಿಗೆ ಭಾವಚಿತ್ರ ಮೆರವಣಿಗೆಯು ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ನೂರಾರು ಭಕ್ತರ ಕಣ್ಮನ ಸೆಳೆಯಿತು.

ಗ್ರಾಮದ 14 ಭಜನಾ ತಂಡಗಳಿಗೆ ಪ್ರೋತ್ಸಾಹದಾಯಕವಾಗಿ ಪ್ರತಿ ವರ್ಷ ಕೊಡುವ ದೇಣಿಗೆ ಈ ಸಲ ತಾಳ ವಾದ್ಯ, ಡೊಳ್ಳು ಕಲಾ ತಂಡಕ್ಕೆ ಡೊಳ್ಳು ವಾದ್ಯವನ್ನು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸರ್ವ ಸದಸ್ಯರು ನೀಡಿ ಕಲಾವಿದರ ತತ್ವ ಪದಗಳಿಗೆ



ಮೆಚ್ಚುಗೆ ವ್ಯಕ್ತಪಡಿಸಿದರು. ಅಲ್ಲಮಪ್ರಭುದೇವರ, ವಿರುಪಾಕ್ಷೇಶ್ವರ, ಮಾರುತಿ, ಜ. ಪಂಚಾಚಾರ್ಯ, ರಾಮಲಿಂಗೇಶ್ವರ, ನಾಗನಾಥ, ಬಿನ್ನಾಳ ಬಸವೇಶ್ವರ, ಲೆಕ್ಕದ ವೀರೇಶ್ವರ, ಮಲ್ಲಿಕಾರ್ಜುನ, ಅನ್ನದಾನೀಶ್ವರ, ಮರುಳ ಸಿದ್ದೇಶ್ವರ ಹಾಗೂ ಆಂಜನೇಯ ಭಜನಾ ಸಂಘಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದವು.

ಇದಕ್ಕೂ ಪೂರ್ವ ವಿವಿಧ ಹೂವುಗಳಿಂದ ಅಲಂಕರಿಸಿದ ಬಸವಣ್ಣ ಮೂರ್ತಿಗೆ ಶರಣಯ್ಯ

> ನಮ್ಮ ಮನೆಯ ಆರಾಧ್ಯ ದೈವವಾಗಿರುವ ಹಾಲಗೊಂಡ ಬಸವಣ್ಣ ದೇವರ ಜಾತ್ರೆ ವಿಶೇಷವಾಗಿದೆ. ಎರಡು ದಿನ ಮುಂಚಿತವಾಗಿ ಬಂದು ಸೇವೆ ಸಲ್ಲಿಸುತ್ತೇನೆ.
>
> – ಕೆ. ಬಸವರಾಜ ಬಳ್ಳಾರಿ.

ಪತ್ರಿಮಠ ಅವರು ವಿಧಿ-ವಿದಾನಗಳೊಂದಿಗೆ ರುದ್ರಾಭಿಷೇಕ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು. ನಂತರ ಸಿದ್ಧ ಸಮಾಧಿ ಯೋಗ ಸಾಧಕರ ಆಶ್ರಯದಲ್ಲಿ ಆಚಾರ್ಯ ರಾಘವೇಂದ್ರ ಕೊಪ್ಪಳ ಅವರ ನೇತೃತ್ವದಲ್ಲಿ ಮೃತ್ಯುಂಜಯ ಹೋಮ ನೆರವೇರಿತು. ನಂತರ ಅನ್ನ ಅನ್ನಸಂತರ್ಪಣೆ ಜರುಗಿತು.



ಕಳೆದ 120 ವರ್ಷಗಳಿಂದ ಆಚರಿಸಿಕೊಂಡು ಬರುತ್ತಿರುವ ಐತಿಹಾಸಿಕ ಲಕ್ಕುಂಡಿ ಗ್ರಾಮದ ಹಾಲಗೊಂಡ ಬಸವೇಶ್ವರ ರಥೋತ್ಸವವು ರಾಜ್ಯದಲ್ಲಿಯೇ ವಿಶೇಷವಾಗಿದೆ. ಗ್ರಾಮದ 14 ಭಜನಾ ಸಂಘಗಳು ಶ್ರಾವಣ ಮಾಸದಲ್ಲಿ ದಿನ ನಿತ್ಯ ಬೆಳಿಗ್ಗೆ ತಮಗೆ ಹತ್ತಿರವಿರುವ ದೇಗುಲಕ್ಕೆ ತೆರಳಿ ಪ್ರಾರ್ಥನೆ ಸಲ್ಲಿಸುವುದು ಸಂಪ್ರದಾಯವಾಗಿದೆ. ಇದರಲ್ಲಿ ಪ್ರತಿ ಶ್ರಾವಣ ಸೋಮವಾರ ಬಸವಣ್ಣನ ದೇಗುಲಕ್ಕೆ ತೆರಳಿ ಶೃದ್ಧಾ-ಭಕ್ತಿಯಿಂದ ಪೂಜೆ ಅರ್ಪಿಸುತ್ತಾರೆ. ಕೊನೆಯ ಸೋಮವಾರ ಗ್ರಾಮದ ಪ್ರಮುಖ ಬೀದಿಯಲ್ಲಿ ವಿವಿಧ ಶರಣರ ಭಾವಚಿತ್ರ ಮೆರವಣಿಗೆಯೊಂದಿಗೆ ಗ್ರಾಮವನ್ನು ಸುತ್ತುವುದೇ ನೋಡುಗರಿಗೆ ಹಬ್ಬ. ಆದರೆ ಮೆರವಣಿಗೆ ಸಾಗುವ ರಸ್ತೆ ಒತ್ತುವರಿಯಿಂದಾಗಿ ಇಕ್ಕಟ್ಟಾಗಿದ್ದು, ಕಿರಿಕಿರಿಯಾಗುತ್ತಿದೆ ಎಂಬ ಮಾತುಗಳು ಭಜನಾ ಸಂಘದ ಸದಸ್ಯರಲ್ಲಿ ಕೇಳಿ ಬರುತ್ತಿದೆ.

**ವಾರ್ತಾ ಇಲಾಖೆ ಮೂಲಕವೇ ಸರ್ಕಾರಿ ಜಾಹೀರಾತು ಬಿಡುಗಡೆಗೆ ಕ್ರಮ ಕೈಗೊಳ್ಳಿ**

# ಜಿಲ್ಲಾಧಿಕಾರಿಗಳಿಗೆ ಸಂಪಾದಕರ ಸಂಘದ ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ 19-01-2017ರ ತಿದ್ದುಪಡಿ ಆದೇಶದ ಪ್ರಕಾರ ಟೆಂಡರ್ ಜಾಹೀರಾತುಗಳನ್ನು ಬಿಡುಗಡೆ ಮಾಡುವಂತೆ ಕೋರಿ ಸೋಮವಾರ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಜಿಲ್ಲಾ/ಪ್ರಾದೇಶಿಕ/ರಾಜ್ಯ ಮಟ್ಟದ ಪತ್ರಿಕೆಗಳಿಗೆ ಸರ್ಕಾರದ ಟೆಂಡರ್ ಮತ್ತು ವರ್ಗೀಕೃತ ಜಾಹೀರಾತು ಬಿಡುಗಡೆಗೆ ಮಾರ್ಗಸೂಚಿಯುಳ್ಳ ತಿದ್ದುಪಡಿ ಆದೇಶವನ್ನು ಸರ್ಕಾರ ಹೊರಡಿಸಿದೆ. ಈ ಆದೇಶದ ಪ್ರತಿಯನ್ನು ಜಿಲ್ಲಾಧಿಕಾರಿಯವರಿಗೆ ಮನವಿ ಪತ್ರದೊಂದಿಗೆ ಸಲ್ಲಿಸಿ, ಸರ್ಕಾರದ ವಿವಿಧ ಇಲಾಖೆಗಳ ಟೆಂಡರ್ ಮತ್ತು ವರ್ಗೀಕೃತ ಜಾಹೀರಾತು ಬಿಡುಗಡೆ ಮಾಡುವಾಗ ತಿದ್ದುಪಡಿ ಆದೇಶದಲ್ಲಿ ಸೂಚಿಸಿದ ಪ್ರಕಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಜಿಲ್ಲಾ/ಪ್ರಾದೇಶಿಕ/ರಾಜ್ಯ ಮಟ್ಟದ ಪತ್ರಿಕೆಗಳಿಗೆ ಸರ್ಕಾರದ ಎಲ್ಲಾ ಇಲಾಖೆಗಳು/ನಿಗಮ/ಮಂಡಳಿಗಳು/ಪ್ರಾಧಿಕಾರಗಳು/ಸ್ಥಳೀಯ ಸಂಸ್ಥೆಗಳು/ಜಿಲ್ಲಾ ಪಂಚಾಯತ್/ ವಿಶ್ವವಿದ್ಯಾಲಯಗಳು ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಿಲ್ಲಾ ಕಛೇರಿ ಮೂಲಕ ಬಿಡುಗಡೆ ಮಾಡಬೇಕು. ಆದರೆ ಗದಗ ಜಿಲ್ಲೆಯ ಅನೇಕ ಕಛೇರಿಗಳು ಈ ತಿದ್ದುಪಡಿ ಆದೇಶ ಉಲ್ಲಂಘಿಸಿ ನೇರವಾಗಿ ರಾಜ್ಯಮಟ್ಟದ ಪತ್ರಿಕೆಗಳಿಗೆ ಟೆಂಡರ್ ಮತ್ತು ವರ್ಗೀವೃತ ಜಾಹೀರಾತುಗಳನ್ನು ಬಿಡಗಡೆ ಮಾಡುತ್ತಿವೆ.ಇದರಿಂದ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಟೆಂಡರ್ ಬಿಡುಗಡೆ ವಿಷಯದಲ್ಲಿ ತಾರತಮ್ಯ ಹಾಗೂ ಅನ್ಯಾಯವಾಗುತ್ತಿದೆ. ಈ ಕ್ರಮವು ಸರ್ಕಾರದ ತಿದ್ದುಪಡಿ ಆದೇಶಕ್ಕೆ ಸಂಪೂರ್ಣ ವಿರುದ್ದವಾಗಿದೆ ಎಂದು ಜಿಲ್ಲಾಧಿಕಾರಿಗಳಿಗೆ ಮಂಜುನಾಥ ಅಬ್ಬಿಗೇರೆ ಮನವರಿಕೆ ಮಾಡಿಕೊಟ್ಟರು. ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿಗಳು ಈ ಕುರಿತು ಕ್ರಮ ತೆಗೆದುಕೊಳ್ಳುವುದಾಗಿ ಸಂಘದ ನಿಯೋಗಕ್ಕೆ ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ವಾರ್ತಾ ಅಧಿಕಾರಿ ವಸಂತ ಮಡ್ಲೂರ, ಪತ್ರಿಕಾ ಸಂಪಾದಕರಾದ ಎಚ್.ಎಂ. ಶರೀಫ್‌ನವರ್, ರಾಜು ಹೆಬ್ಬಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವಪ್ಪ ಎನ್.ಲಿಂಗದಾಳ, ಕುನಾಲ ಅಬ್ಬಿಗೇರಿ ಉಪಸ್ಥಿತರಿದ್ದರು.

ಸರ್ಕಾರದ ತಿದ್ದುಪಡಿ ಆದೇಶದಂತೆ ಗದಗ ಜಿಲ್ಲೆಯ/ತಾಲೂಕಿನ ಸಂಬಂಧಿಸಿದ ಎಲ್ಲಾ ಕಛೇರಿಗಳು ತಮ್ಮ ಕಛೇರಿಗೆ ಸಂಬಂಧಿಸಿದ ಟೆಂಡರ್ ಮತ್ತು ವರ್ಗೀವೃತ ಜಾಹೀರಾತುಗಳನ್ನು ಕಡ್ಡಾಯವಾಗಿ ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಇಲಾಖೆ ಇವರ ಮೂಲಕ ಬಿಡುಗಡೆ ಮಾಡುವಂತೆ ಸೂಚನೆ ನೀಡಿ ಸುತ್ತೋಲೆ ಹೊರಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಸಂಘದ ಗದಗ ಜಿಲ್ಲಾ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾಧ್ಯಕ್ಷರಾದ ಜಗದೀಶ ಎಸ್.ಪಿ. ಮನವಿ ಸಲ್ಲಿಸಿದರು.

**ವಕ್ಫ್, ವಸತಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಜಮೀರ ಅಹ್ಮದ ಸೂಚನೆ**

# ಬಾಕಿ ಪ್ರಕರಣಗಳನ್ನು ತಿಂಗಳಲ್ಲಿ ಪರಿಹರಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯಲ್ಲಿ 2453 ವಕ್ಫ್ ಆಸ್ತಿಗಳಿದ್ದು ಇವುಗಳಲ್ಲಿ 481 ಪ್ರಕರಣಗಳು ಮಾತ್ರ ವಿವಿಧ ಹಂತಗಳಲ್ಲಿ ಬಾಕಿ ಇವೆ. ಇವುಗಳನ್ನು ಬೇಗ ಪರಿಹರಿಸಬೇಕು. ಉಳಿದ ಜಿಲ್ಲೆಗಳಿಗೆ ಹೋಲಿಸಿದಾಗ ವಕ್ಫ್ ಆಸ್ತಿಗಳ ಸಮೀಕ್ಷೆ, ರಕ್ಷಣೆಯಲ್ಲಿ ಧಾರವಾಡ ಜಿಲ್ಲೆಯಲ್ಲಿ ಉತ್ತಮ ಕೆಲಸವಾಗಿದೆ ಎಂದು ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಸಚಿವ ಬಿ.ಝಡ್. ಜಮೀರ ಅಹ್ಮದ ಹೇಳಿದರು.

ಅವರು ಸೋಮವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಧಾರವಾಡ ಮತ್ತು ಉತ್ತರ ಕನ್ನಡ ಜಿಲ್ಲೆಯ ಅಧಿಕಾರಿಗಳೊಂದಿಗೆ ವಕ್ಫ್ ಮತ್ತು ವಸತಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡಿದರು.

ಧಾರವಾಡ ಜಿಲ್ಲೆಯಲ್ಲಿ 604 ವಕ್ಫ್ ಸಂಸ್ಥೆಗಳಿಗೆ 2453 ವಕ್ಫ್ ಆಸ್ತಿಗಳಿವೆ. ವಕ್ಫ್



ಸಂಬಂಧಿಸಿದಂತೆ ಯಾವುದೇ ಆಸ್ತಿಯು ಒತ್ತುವರಿ ಆಗಿರುವ ವರದಿ ಇಲ್ಲ.

ವಿವಿಧ ಹಂತಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಅಧಿಕಾರಿಗಳು ಮುಕ್ತಾಯಗೊಳಿಸಬೇಕೆಂದು ಅವರು ಹೇಳಿದರು.

ವಸತಿ ಯೋಜನೆಯಡಿ ಸ್ಲಂಗಳಲ್ಲಿ ವಾಸಿಸುವ ಜನರಿಗೆ ಹಕ್ಕುಪತ್ರ ವಿತರಣೆ ಕಾರ್ಯ ನಡೆದಿದ್ದು, ಅವಳಿನಗರದಲ್ಲಿ ಬಾಕಿ ಇರುವ ಹಕ್ಕು ಪತ್ರ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಉತ್ತರ-ಕನ್ನಡ ಜಿಲ್ಲೆಯಲ್ಲಿ ವಕ್ಫ್ ಆಸ್ತಿ ಹಾಗೂ ಕಬರಸ್ತಾನಗಳಿಗೆ ಭೂಮಿ ಸಮಸ್ಯೆ ಇದ್ದು, ಈ ಕುರಿತು ಕಂದಾಯ ಹಾಗೂ ಅರಣ್ಯ ಸಚಿವರೊಂದಿಗೆ ಸಭೆ ಜರುಗಿಸಿ, ಸೂಕ್ತ ನಿರ್ದೇಶನ ನೀಡಲಾಗುವುದು ಎಂದು ಸಚಿವರು ತಿಳಿಸಿದರು.

ಸಭೆಯಲ್ಲಿ ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ, ಶಾಸಕ ಎನ್.ಎಚ್. ಕೋನರಡ್ಡಿ, ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು, ಉತ್ತರ-ಕನ್ನಡ ಜಿಲ್ಲಾಧಿಕಾರಿ ಲಕ್ಷ್ಮಿ ಪ್ರಿಯಾ ಕೆ. ಸೇರಿಂತೆ ವಕ್ಫ್ ವಸತಿ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಆಯುಕ್ತರು, ರಾಜ್ಯ ಮಟ್ಟದ ಅಧಿಕಾರಿಗಳು, ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

**ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್‌ರಿಂದ ಪ್ರೇರಣಾತ್ಮಕ ಪಾಠ**

# ಉತ್ತಮ ಫಲಿತಾಂಶಕ್ಕೆ ಶ್ರಮಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿಕ್ಷಣದ ಗುಣಮಟ್ಟ ಉನ್ನತ ಮಟ್ಟಕ್ಕೇರಲು ಹಾಗೂ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಉತ್ತಮ ಫಲಿತಾಂಶಕ್ಕಾಗಿ ಮುಂದಿನ ದಿನಗಳಲ್ಲಿ ಪ್ರತೀ ಪ್ರೌಢಶಾಲೆಗಳಲ್ಲಿ ಕೈಗೊಳ್ಳಬೇಕಾದ ವಿನೂತನ ಕ್ರಮಗಳ ಕುರಿತು ಆತ್ಮೀಯವಾಗಿ ಮುಖ್ಯ ಶಿಕ್ಷಕರೊಂದಿಗೆ ಸಂವಾದ ಮಾಡಿ, ಸರಿಯಾದ ಯೋಜನೆ ಹಾಗೂ ಪರಿಣಾಮಕಾರಿ ಅನುಷ್ಠಾನ, ಚಟುವಟಿಕೆ ಆಧಾರಿತ ಕಲಿಕೆ, ಶಿಸ್ತಿನಿಂದ ಶಾಲಾ ಹಂತದ ಘಟಕ ಪರೀಕ್ಷೆ ಹಾಗೂ ಜಿಲ್ಲಾ ಪರೀಕ್ಷೆ ಸಂಘಟನೆ ಈ ಎಲ್ಲ ಯೋಜನೆಗಳನ್ನು ಮುಖ್ಯೋಪಾಧ್ಯಾಯರು ತಮ್ಮ ಶಾಲೆಯ ಶಿಕ್ಷಕರೆಲ್ಲರೊಂದಿಗೆ ಪರಿಣಾಮಕಾರಿ ಅನುಷ್ಠಾನಕ್ಕೆ ಮುಂದಾಗಬೇಕು ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಭರತ್ ಎಸ್ ಕಿವಿಮಾತು ಹೇಳಿದರು.

ಅವರು ಗದಗ ಜಿ.ಪಂ ಸಭಾಭವನದಲ್ಲಿ ಜರುಗಿದ ಗದಗ ಶಹರ ವಲಯ ಹಾಗೂ ಗದಗ ಗ್ರಾಮೀಣ ವಲಯದ ಎಲ್ಲಾ ಸರಕಾರಿ, ಅನುದಾನಿತ, ಅನುದಾನರಹಿತ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರಿಗೆ ಜಿಲ್ಲೆಯ 'ಶೈಕ್ಷಣಿಕ ಅಭಿವೃದ್ಧಿ ಯೋಜನೆ' ಹಾಗೂ 'ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಹಾಕಿಕೊಂಡ ಚಟುವಟಿಕೆ'ಗಳ ಬಗ್ಗೆ ಹಾಗೂ ತಮ್ಮ ಶಾಲೆಯ ವಿದ್ಯಾರ್ಥಿಗಳಿಗಾಗಿ ತಮ್ಮ ಮಿತಿಯಲ್ಲಿ ವಿಶೇಷ ಚಟುವಟಿಕೆಗಳನ್ನು ಆಯೋಜಿಸುವಂತೆ ಪ್ರತಿಯೊಬ್ಬ ಮುಖ್ಯ ಶಿಕ್ಷಕರ ಮನಮುಟ್ಟುವಂತೆ, ಒಬ್ಬ ಕ್ರಿಯಾಶೀಲ ಶಿಕ್ಷಕರಂತೆ ಪ್ರೋತ್ಸಾಹಿಸಿ, ವಿಶಿಷ್ಟ ರೀತಿಯಲ್ಲಿ ಮಾರ್ಗದರ್ಶನ ಮಾಡಿದರು.

ಜಿಲ್ಲೆಯಲ್ಲಿ ಏಕಕಾಲಕ್ಕೆ ನಾಲ್ಕು ವಿಶೇಷ ಪರೀಕ್ಷೆಗಳನ್ನು ನಡೆಸಲಾಗುವುದು. ಪ್ರಶ್ನೆ ಪತ್ರಿಕೆ ಜಿಲ್ಲಾ ಮಟ್ಟದಲ್ಲಿ ತಯಾರಿಸಿ, ಶಾಲಾ ಹಂತದಲ್ಲಿ ಪರೀಕ್ಷೆ ಸಂಘಟಿಸಿ, ಜಿಲ್ಲಾ ಹಾಗೂ ತಾಲೂಕು ಶಾಲಾ ಮಟ್ಟದಲ್ಲಿ ಎಲ್ಲಾ ಶಾಲೆಗಳ ಮಕ್ಕಳ ಫಲಿತಾಂಶ ವಿಶ್ಲೇಷಣೆ ಮಾಡಲಾಗುವುದು. ಫಲಿತಾಂಶ ಆಧರಿಸಿ ವಿದ್ಯಾರ್ಥಿಗಳ ಉತ್ತಮ ಫಲಿತಾಂಶಕ್ಕಾಗಿ ಚಟುವಟಿಕೆಗಳನ್ನು ರೂಪಿಸಿ ಎಂದರು.

ಕಾರ್ಯಕ್ರಮದಲ್ಲಿ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಆರ್.ಎಸ್. ಬುರಡಿ, ವಿ.ವಿ. ನಡುವಿನಮನಿ, ಎಚ್.ಬಿ. ರಡ್ಡೇರ ಮುಂತಾದವರು ಹಾಜರಿದ್ದರು.


# ರಾಜು ಭೂಶೆಟ್ಟಿಯವರ ಚಿಂತನ ನಾಳೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಿಜ್ಞಾನ ಸಂವಹನಕಾರರಾದ ರಾಜು ಭೂಶೆಟ್ಟಿಯವರ ಆತ್ಮ ವಿಶ್ವಾಸ, ಸಮಯ ನಿರ್ವಹಣೆ, ಸೃಜನಶೀಲತೆ ಈ ವಿಷಯಗಳನ್ನಾಧರಿಸಿದ ಚಿಂತನ ಕಾರ್ಯಕ್ರಮವು ಸೆ.4ರಂದು ಧಾರವಾಡ ಆಕಾಶವಾಣಿಯ ಮೂಲಕ ಬೆಳಿಗ್ಗೆ 6.25ಕ್ಕೆ ಪ್ರಸಾರವಾಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಂಭ್ರಮದ ಹಾಲಗೊಂಡ ಬಸವೇಶ್ವರ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಹಾಲಗೊಂಡ ಬಸವೇಶ್ವರ ರಥೋತ್ಸವವು ಸೋಮವಾರ ಸಂಜೆ ಸಾವಿರಾರು ಭಕ್ತಾಧಿಗಳ ಮಧ್ಯೆ ಭಕ್ತಿ ಭಾವದಿಂದ ಜರುಗಿತು.

ಬಜಾರ ರಸ್ತೆಯ ಕೆ.ಜಿ.ಎಸ್. ಶಾಲೆಯಿಂದ ಆರಂಭಗೊಂಡು ವಿರುಪಾಕ್ಷೇಶ್ವರ ದೇವಸ್ಥಾನದವರೆಗೂ ರಥೋತ್ಸವ ಸಾಗಿತು. ರಥೋತ್ಸವದಲ್ಲಿ ಭಾಗವಹಿಸಿದ ಡೊಳ್ಳು ಕುಣಿತವು ಜನ ಮನ ಸೆಳೆಯಿತು. ಇದಕ್ಕೂ ಪೂರ್ವ ಶೇಡದವರ ಮನೆಯಿಂದ ನೈವೇದ್ಯವನ್ನು ತಂದು ದೇವಸ್ಥಾನಕ್ಕೆ ತಲುಪಿಸಿದ ನಂತರ ತೇರನ್ನು ಐದು ಸುತ್ತು ಪ್ರದಕ್ಷಿಣೆ ಹಾಕಿದ ನಂತರ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.



ಶ್ರಾವಣ ಮಾಸದ ಕೊನೆಯ ಸೋಮವಾರದಂದು ಗದಗ ಜಿಲ್ಲಾ ಮುಂಡರಗಿ ತಾಲೂಕಿನ ಡೋಣಿ ಗ್ರಾಮದ ಶ್ರೀ ಸಿದ್ಧಲಿಂಗೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ರಥೋತ್ಸವ ವಿಜೃಂಭಣೆಯಿಂದ ಜರುಗಿತು. ಗ್ರಾಮದ ಮುಖಂಡರು, ಅಪಾರ ಪ್ರಮಾಣದ ಭಕ್ತರು ಪಾಲ್ಗೊಂಡಿದ್ದರು. ರಥೋತ್ಸವ ವೇಳೆ ಭಜನಾ ಮೇಳ, ಡೊಳ್ಳಿನ ಮಜಲು ಮತ್ತಷ್ಟು ಮೆರಗು ನೀಡಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka